ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

24 ಜೂನ್, 2026 ಬುಧವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ : 105 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629


ಭಾರತ-ಜಪಾನ್ ಶೃಂಗಸಭೆಯಲ್ಲಿ ಭಾಗವಹಿಸುವ ಸಲುವಾಗಿ ಜಪಾನ್ ಪ್ರಧಾನಿ ಸನೇ ತಕೈಚಿ ಅವರು ಜುಲೈ ಮೊದಲ ವಾರದಲ್ಲಿ ಭಾರತಕ್ಕೆ ಭೇಟಿ ನೀಡಲಿದ್ದಾರೆ.





ಭೂ ಕುಸಿತ ತುರ್ತು ಪರಿಸ್ಥಿತಿ ಎದುರಿಸಲು ಸನ್ನದ್ಧ » 2

ಇರಾನ್ ಅತ್ಯುನ್ನತ ಮಟ್ಟದ ಅಣು ಪರಿಶೀಲನೆಗೆ ಒಪ್ಪಿದೆ ಎಂದು ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ.





ವಿಶ್ವಾಸ ದ್ರೋಹಿಗಳ ಉಚ್ಚಾಟಿಸಲು ರಾಜ್ಯ ನಾಯಕರ ಮನವಿ » 4

# ಆಣೆ ಪ್ರಮಾಣದ ಅವಾಂತರ ಬೇಡ

## ರಾಜ್ಯ ನಾಯಕರಿಗೆ ಬಿಜೆಪಿ ಹೈಕಮಾಂಡ್ ಸೂಚನೆ | ನಿಮ್ಮ ನಿರ್ಲಕ್ಷ್ಯದಿಂದಲೇ ಅಡ್ಡಮತವೆಂದು ಅಸಮಾಧಾನ

• ಪ್ರಜೋದಯ ವರದಿ

**ಬೆಂಗಳೂರು:** ಶಾಸಕರ ಬಳಿ ಧರ್ಮಸ್ಥಳದಲ್ಲಿ ಆಣೆ ಪ್ರಮಾಣ ಮಾಡಿಸಿ ಮತ್ತೊಂದು ಅವಾಂತರದಿಂದ ಪಕ್ಷಕ್ಕೆ ಮುಜುಗರ ತರಬೇಡಿ. ನಿಮ್ಮ ನಿರ್ಲಕ್ಷ್ಯದಿಂದಲೇ ಈ ಬೆಳವಣಿಗೆಯಾಗಿದೆ. ಮುಂದಿನದ್ದು ನಾವು ನೋಡಿಕೊಳ್ಳುತ್ತೇವೆಂದು ಬಿಜೆಪಿ ಹೈಕಮಾಂಡ್ ರಾಜ್ಯ ನಾಯಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದೆ.

ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಶಾಸಕರ ಅಡ್ಡ ಮತದಾನ ಹಿನ್ನಲೆ ಮಂಗಳವಾರ ಹೈಕಮಾಂಡ್ ಕರ್ನಾಟಕ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಪಕ್ಷ ನಾಯಕ ಆರ್.ಅಶೋಕ್ ಅವರನ್ನು ದೆಹಲಿಗೆ ಕರೆಸಿಕೊಂಡು ಸಭೆ ನಡೆಸಿ ವಿವರಣೆ ಕೇಳಿತು. ಈ ಸಂದರ್ಭದಲ್ಲಿ ರಾಜ್ಯ ನಾಯಕರನ್ನು ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಸಾಲು ಸಾಲು ಪ್ರಶ್ನೆ ಮಾಡಿ ಬೇಸರ ಹೊರ ಹಾಕಿದ್ದಾರೆ. ಪಕ್ಷದ ನಾಯಕರಿಂದ ವ್ಯಕ್ತವಾದ ವಿರೋಧದ ಬೆನ್ನಲ್ಲೇ ಆಣೆ ಪ್ರಮಾಣಕ್ಕೆ ತಡೆ ಬಿದ್ದಿದ್ದು ಧರ್ಮಸ್ಥಳದಲ್ಲಿ ನಡೆಸಲು ಉದ್ದೇಶಿಸಿದ್ದ ಶಾಸಕಾಂಗ ಪಕ್ಷದ ಸಭೆಯನ್ನೂ ರದ್ದುಗೊಳಿಸಲಾಗಿದೆ.

**ಕಠಿಣ ಕ್ರಮ ತೆಗೆದುಕೊಳ್ಳುತ್ತೇವೆ**

ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು, ಧರ್ಮಸ್ಥಳವನ್ನು ರಾಜಕೀಯ ಅಪಚಾರಕ್ಕೆ ಬಳಸುವುದು ಬೇಡವೆಂದು ನಮ್ಮ ಪಕ್ಷದ ಹಿರಿಯರಿಂದಲೇ ಸಲಹೆ ಬಂದ ಹಿನ್ನಲೆ ನಮ್ಮ ನಿರ್ಧಾರದಿಂದ ಹಿಂದೆ ಸರಿದಿದ್ದೇವೆ. ಪಕ್ಷದ ಆಂತರಿಕ ವಿಚಾರಗಳನ್ನು ಪಕ್ಷದ ವೇದಿಕೆಯಲ್ಲಿಯೇ ಚರ್ಚಿಸಲಾಗುವುದೆಂದು ತಿಳಿಸಿದರು.

ಅಡ್ಡ ಮತದಾನದ ಬಗ್ಗೆ ರಾಷ್ಟ್ರೀಯ ಅಧ್ಯಕ್ಷರೊಂದಿಗೆ ಸುದೀರ್ಘ ಚರ್ಚೆ ನಡೆಸಲಾಗಿದೆ. ಈ ವಿಷಯವನ್ನು



**ರಾಜ್ಯ ನಾಯಕರ ವಿರುದ್ಧವೇ ಅಸಮಾಧಾನ**

ನಿಮ್ಮ ತಪ್ಪು ಮತ್ತು ವೈಫಲ್ಯದಿಂದಲೇ ರಾಜ್ಯದಲ್ಲಿ ಅಡ್ಡಮತದಾನ ಚಲಾವಣೆ ಆಯಿತು. ನಿಮಗೆ ಶಾಸಕರ ಮೇಲೆ ಯಾವುದೇ ಹಿಡಿತ ಇರಲಿಲ್ಲ, ಅವರ ಮೇಲೆ ಸರಿಯಾದ ನಿಗಾ ಇಡುವಲ್ಲಿಯೂ ನೀವು ಸಂಪೂರ್ಣವಾಗಿ ವಿಫಲರಾಗಿದ್ದೀರಿ. ಕಾಂಗ್ರೆಸ್ ನಾಯಕರು ಆಮಿಷ ಒಡ್ಡಿ ನಿಮ್ಮದೇ ಶಾಸಕರನ್ನು ಸೆಳೆಯಲು ಅವಕಾಶ ಮಾಡಿಕೊಟ್ಟಿದ್ದೇ ನಿಮ್ಮ ಬೇಜವಾಬ್ದಾರಿತನ ಎಂದು ವರಿಷ್ಠರು ರಾಜ್ಯ ನಾಯಕರ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ.

> **ಅಡ್ಡಮತದಾನ ಬಗ್ಗೆ ರಾಷ್ಟ್ರಾಧ್ಯಕ್ಷರಿಗೆ ಪ್ರಾಥಮಿಕ ವರದಿ ಸಲ್ಲಿಸುತ್ತೇವೆ. ನಾವು ಈ ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಂಡಿದ್ದು ಸತ್ಯ ಶೋಧನಾ ಸಮಿತಿ ಪತ್ತೆಹಚ್ಚಲಿದೆ.**
> **-ಬಿ.ವೈ.ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ**

ನಮಗೆ ಬಿಡಿ. ಪಕ್ಷಕ್ಕೆ ದ್ರೋಹ ಮಾಡಿದವರ ವಿರುದ್ಧ ಈಗಾಗಲೇ ಕ್ರಮ ಜರುಗಿಸಲಾಗಿದ್ದು, ಮುಂದಿನ ನಿರ್ಧಾರವನ್ನು ವರಿಷ್ಠರೇ ತೆಗೆದುಕೊಳ್ಳಲಿದ್ದಾರೆ. ಪಕ್ಷ ಸಂಘಟನೆ ಮತ್ತು ಮುಂದಿನ ದಿನಗಳಲ್ಲಿ ಬಿಜೆಪಿಯನ್ನು ರಾಜ್ಯದಲ್ಲಿ ಮತ್ತೆ ಅಧಿಕಾರಕ್ಕೆ ತರುವ ಬಗ್ಗೆ ಸಮಾಲೋಚನೆ ನಡೆಸಲಾಗಿದೆ ಎಂದು ಹೇಳಿದರು.

ಅಡ್ಡ ಮತದಾನದ ಮೂಲಕ ಪಕ್ಷಕ್ಕೆ ಮೋಸ ಮಾಡಿದವರನ್ನು ಸುಮ್ಮನೆ ಬಿಡುವುದಿಲ್ಲ, ತಕ್ಕ ಶಿಕ್ಷೆ ಕೊಟ್ಟೇ ಕೊಡುತ್ತೇವೆ. ಅದು ಸೆರಗಲ್ಲಿ ಕೆಂಡ ಮುಚ್ಚಿಟ್ಟಂತೆ. ಯಾರು ಅಡ್ಡ ಮತದಾನ ಮಾಡಿದ್ದಾರೆಂದು ಒಂದಲ್ಲ ಒಂದು ದಿನ ಆಚೆ ಬಂದೇ ಬರುತ್ತದೆ. ಯಾರು ಪಕ್ಷಕ್ಕೆ ದ್ರೋಹ ಬಗೆದಿದ್ದಾರೋ ಅವರಿಗೆ ತಕ್ಕ ಬುದ್ಧಿ ಕಲಿಸುತ್ತೇವೆ. ಇಂತಹ ದುಷ್ಕೃತ್ಯ ಮತ್ತೆ ಮಾಡಬಾರದು. ಮಾಧ್ಯಮಗಳಲ್ಲಿ ಅಡ್ಡ ಮತದಾನ ಮಾಡಿದವರ ಬಗ್ಗೆ ದಿನಕ್ಕೊಂದು ಹೆಸರುಗಳು ಬರುತ್ತವೆ. ಇದನ್ನು ಯಾರೋ ಮಾಡುತ್ತಿದ್ದಾರೆ. ಕಾಂಗ್ರೆಸ್‌ನವರೇ ನಮ್ಮ ಪಕ್ಷದಲ್ಲಿ ಭಿನ್ನಾಭಿಪ್ರಾಯ, ಗೊಂದಲ ಸೃಷ್ಟಿ ಮಾಡಲು ಹೀಗೆ ಮಾಡುತ್ತಿದ್ದಾರೆಂದು ಆರೋಪಿಸಿದರು.

**ಪ್ರಾಥಮಿಕ ವರದಿ ಸಿದ್ಧ**

ಸಾಂದರ್ಭಿಕ ಸಾಕ್ಷಿ ಮತ್ತು ಹೇಳಿಕೆ ಪರಾಮರ್ಶಿಸಿ ಸಿ.ಟಿ.ರವಿ ನೇತೃತ್ವದ ಸಮಿತಿ ಪ್ರಾಥಮಿಕ ವರದಿ ಸಿದ್ಧಪಡಿಸಿದ್ದು, ದೆಹಲಿಯಿಂದ ಸೂಚನೆ ಬಂದರೆ ಪ್ರಾಥಮಿಕ ಮಾಹಿತಿ ರವಾನೆ ಸಾಧ್ಯತೆ ಇದೆ. ಇಲ್ಲದಿದ್ದರೆ ಬಿ.ವೈ. ವಿಜಯೇಂದ್ರ ದೆಹಲಿಯಿಂದ ಹಿಂತಿರುಗಿದ ಬಳಿಕ ವರದಿ ಸಲ್ಲಿಕೆ ನಡೆಯಲಿದೆ. ಆದರೆ, ಅಡ್ಡ ಮತದಾನ ಮಾಡಿದವರ ಹೆಸರು ಉಲ್ಲೇಖಿಸುವುದು ಕಷ್ಟಸಾಧ್ಯದ ವಿಚಾರವಾಗಿದ್ದು, ಬಹುತೇಕ ಎಲ್ಲಾ ಶಾಸಕರನ್ನು ದೂರವಾಣಿ ಮೂಲಕ ಸಮಿತಿ ಸಂಪರ್ಕಿಸಿದೆ. ಜೂ.25ರೊಳಗೆ ವರದಿ ಸಲ್ಲಿಸುವಂತೆ ಸಮಿತಿಗೆ ಈಗಾಗಲೇ ಆದೇಶಿಸಲಾಗಿದೆ.

## ಹೊಳೆನರಸೀಪುರ ಸರ್ಕಾರಿ ಆಸ್ಪತ್ರೆ ಗುತ್ತಿಗೆ ನೌಕರರ ಪ್ರತಿಭಟನೆ



• ಪ್ರಜೋದಯ ವರದಿ

**ಹೊಳೆನರಸೀಪುರ:** ಪಟ್ಟಣದ ಸರ್ಕಾರಿ ಆಸ್ಪತ್ರೆಯ ಡಿ ದರ್ಜೆಯ 20 ನೌಕರರನ್ನು ಕೆಲಸದಿಂದ ತೆಗೆದು ಹಾಕಲಾಗುತ್ತಿದೆ ಎಂದು ಆರೋಪಿಸಿ ಮಂಗಳವಾರ ಹೊರಗುತ್ತಿಗೆ ನೌಕರರು ದಿಢೀರ್ ಪ್ರತಿಭಟನೆ ನಡೆಸಿದರು.

ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ಸಂಸದ ಶ್ರೇಯಶ್ ಪಟೇಲ್ ಅವರು ಮಾತನಾಡಿ, ಇಂತಹ ಪರಿಸ್ಥಿತಿ ಏಕೆ ನಿರ್ಮಾಣವಾಯಿತು ಎಂದು ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿ ಡಾ|| ಮಂಜುಳಾ ಅವರನ್ನು ಪ್ರಶ್ನಿಸಿದರು.

ಮಂಜುಳಾ ಅವರು ಮಾತನಾಡಿ, ವಯಸ್ಸಾದವರಿಗೆ ಕೆಲಸ ಮಾಡಲು ಸಾಧ್ಯ ಆಗುತ್ತಿರಲಿಲ್ಲ. ಮತ್ತೆ ಕೆಲವರು ಸರಿಯಾಗಿ ಕೆಲಸ ಮಾಡುತ್ತಿರಲಿಲ್ಲ. ಹಾಗಾಗಿ ತೆಗೆದಿರುಬಹುದು. ಇದು ಏಜೆನ್ಸಿ ನಿರ್ಧಾರವಾಗಿದ್ದು, ನನಗೆ ಯಾರನ್ನೂ ಕೆಲಸಕ್ಕೆ ತೆಗೆದುಕೊಳ್ಳಲು ಅಥವಾ ಕೈ ಬಿಡಲು ಅಧಿಕಾರ ಇಲ್ಲ ಎಂದರು.

350 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆ ಇದಾಗಿದೆ. 250 ಹಾಸಿಗೆ ಆಸ್ಪತ್ರೆ ಆಗಿದ್ದಾಗ ಇದ್ದಷ್ಟೇ ಗುತ್ತಿಗೆ ನೌಕರರು ಇದ್ದಾರೆ. ಗುತ್ತಿಗೆ ನೌಕರರ ಸಂಖ್ಯೆಯನ್ನು 100ಕ್ಕೆ ಹೆಚ್ಚಿಸಿದರೆ ಈ ಹಿಂದೆ ಕೆಲಸ ಮಾಡುತ್ತಿದ್ದವರ ಜೊತೆಗೆ ಹೊಸಬರನ್ನೂ ಸೇರಿಸಿಕೊಳ್ಳಲು ಅವಕಾಶ ಆಗುತ್ತದೆಂದು ಕೆಲವರು ಅಭಿಪ್ರಾಯಪಟ್ಟರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ|| ಅನಿಲ್, ಸರ್ಕಾರಿ ಆಸ್ಪತ್ರೆ ಗುತ್ತಿಗೆ ನೌಕರರ ಸಂಘದ ಅಧ್ಯಕ್ಷ ಗಂಗಾಧರ್, ಬಿಎಸ್ಪಿ ಮುಖಂಡ ತಾರೇಶ್ ಮತ್ತಿತರರಿದ್ದರು.

## ವಿದ್ಯುತ್‌ಕ್ಷೇತ್ರ ಖಾಸಗೀಕರಣ ಪ್ರಸ್ತಾವನೆಗೆ ವಿರೋಧ

• ಪ್ರಜೋದಯ ವರದಿ

**ಹಾಸನ:** ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸುವ ಪ್ರಸ್ತಾವನೆಯನ್ನು ಸರ್ಕಾರ ಕೈಬಿಡಬೇಕೆಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದಿಂದ ಜಿಲ್ಲಾಡಳಿತದ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ವಿದ್ಯುತ್ ಕ್ಷೇತ್ರವು ಸಾರ್ವಜನಿಕ ಸೇವೆಯ ಪ್ರಮುಖ ಅಂಗವಾಗಿದ್ದು, ಖಾಸಗೀಕರಣದಿಂದ ರೈತರು, ಸಾಮಾನ್ಯ ಗ್ರಾಹಕರು ಹಾಗು ವಿದ್ಯುತ್ ಸಂಸ್ಥೆಗಳ ನೌಕರರ ಹಿತಾಸಕ್ತಿಗೆ ಧಕ್ಕೆ ಉಂಟಾಗಲಿದೆ. ಖಾಸಗಿ ಸಂಸ್ಥೆಗಳ ಪ್ರವೇಶದಿಂದ ವಿದ್ಯುತ್ ದರ ಏರಿಕೆಯಾಗುವ ಸಾಧ್ಯತೆ ಇದ್ದು, ಕೃಷಿ ಚಟುವಟಿಕೆಗಳ ಮೇಲೂ ಹೊರೆ ಬೀಳಲಿದೆ ಎಂದು ಹೇಳಿದರು.

ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಕುರಿತು ಸರ್ಕಾರ ಹೊರಡಿಸಿರುವ ಇತ್ತೀಚಿನ ಆದೇಶವನ್ನು ತಕ್ಷಣ ಹಿಂಪಡೆಯಬೇಕು.



ರೈತರಿಗೆ ನಿರಂತರ ಮತ್ತು ಕೈಗೆಟುಕುವ ದರದಲ್ಲಿ ವಿದ್ಯುತ್ ಪೂರೈಕೆ ಖಚಿತಪಡಿಸಬೇಕು. ಟ್ರಾನ್ಸ್‌ಫಾರ್ಮರ್, ವಿದ್ಯುತ್ ಕಂಬ, ತಂತಿ ಸೇರಿ ಮೂಲಸೌಕರ್ಯಗಳ ವೆಚ್ಚವನ್ನು ಸರ್ಕಾರವೇ ಭರಿಸಬೇಕು. ಈಗಾಗಲೇ ಕೃಷಿ ಸಂಕಷ್ಟದಲ್ಲಿರುವ ರೈತರಿಗೆ ಹೆಚ್ಚುವರಿ ಆರ್ಥಿಕ ಹೊರೆ ವಿಧಿಸುವುದು ಸೂಕ್ತವಲ್ಲ. ರೈತರ ಹಿತಾಸಕ್ತಿಗೆ ವಿರುದ್ಧವಾದ ನೀತಿಗಳನ್ನು ಜಾರಿಗೆ ತರದೇ, ಕೃಷಿ ಸ್ನೇಹಿ ಕ್ರಮಗಳನ್ನು ಅನುಸರಿಸಬೇಕೆಂದು ಮನವಿ ಮಾಡಿದರು.

ರೈತ ಸಂಘದ ಜಿಲ್ಲಾಧ್ಯಕ್ಷ ಕಣಗಾಲ್ ಮೂರ್ತಿ, ಭುವನೇಶ್, ಮಂಜು ಬಿಟ್ಟಗೌಡನಹಳ್ಳಿ, ಪಾಲಾಕ್ಷ, ಪಲ್ಲವಿ, ಶಿವರಾಜ್, ಶೇಷಣ್ಣ, ಪಾಪಣ್ಣ, ಉಮಾಪತಿ, ರಾಮೇಗೌಡ ಸೇರಿ ಸಂಘದ ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಶಾಸಕ ಸಿಮೆಂಟ್ ಮಂಜು ವಿರುದ್ಧ ಕಮೀಷನ್ ಆರೋಪ

### ಸಿ.ಎಂ. ಕಚೇರಿ ಎದುರು ಹೆಚ್.ಎಂ.ವಿಶ್ವನಾಥ್ ಸತ್ಯಾಗ್ರಹ ಎಚ್ಚರಿಕೆ

• ಪ್ರಜೋದಯ ವರದಿ

**ಸಕಲೇಶಪುರ:** ದಲಿತ ಗುತ್ತಿಗೆದಾರನಿಗೆ ಮಂಜೂರಾಗಿರುವ ಕಾಮಗಾರಿ ಆರಂಭಿಸಲು ಸ್ಥಳೀಯ ಶಾಸಕರು ಕಮೀಷನ್‌ಗೆ ಬೇಡಿಕೆ ಇಟ್ಟು ಉದ್ದೇಶಪೂರ್ವಕವಾಗಿ ವಿಳಂಬ ಮಾಡುತ್ತಿದ್ದಾರೆಂದು ಮಾಜಿ ಶಾಸಕ ಹೆಚ್.ಎಂ. ವಿಶ್ವನಾಥ್ ಅವರು ಆರೋಪಿಸಿದರು.

ಮಂಗಳವಾರ ಪಟ್ಟಣದ ಲೋಕೋಪಯೋಗಿ ಇಲಾಖೆ ಕಚೇರಿ ಎದುರು ಸಾಂಕೇತಿಕ ಪ್ರತಿಭಟನೆ ನಡೆಸಿದ ಅವರು, ಇಲಾಖೆಯ ಮುಖ್ಯ ಇಂಜಿನೀಯರ್ ಪ್ರಸನ್ನಕುಮಾರ್ ಅವರಿಗೆ ಮೌಖಿಕ ದೂರು ಸಲ್ಲಿಸಿ, ಗುತ್ತಿಗೆದಾರರಿಗೆ ಅನಗತ್ಯ ತೊಂದರೆ ನೀಡದೆ ಕಾಮಗಾರಿ ಆರಂಭಿಸಲು ಅವಕಾಶ ಕಲ್ಪಿಸುವಂತೆ ಒತ್ತಾಯಿಸಿದರು.

ಜಲಜೀವನ್ ಮಿಷನ್ (ಜೆಜೆಎಂ) ಸೇರಿ ವಿವಿಧ ಕಾಮಗಾರಿಗಳಲ್ಲಿ ಶೇಕಡಾವಾರು ಹಣದ ವ್ಯವಹಾರ ನಡೆಯುತ್ತಿದೆ ಎಂಬ ಆರೋಪ ಮಾಡಿರುವ ಅವರು, ಈ ಕಾರಣದಿಂದ ಅಭಿವೃದ್ಧಿ ಕಾಮಗಾರಿಗಳು ಸ್ಥಗಿತಗೊಂಡಿವೆ. ಸಾರ್ವಜನಿಕ ಕಾಮಗಾರಿಗಳಿಗೆ ಅಡ್ಡಿಯಾಗಬಾರದೆಂದು ಆಗ್ರಹಿಸಿದರು.



ಇತ್ತೀಚೆಗೆ ನಡೆದ ವಿಧಾನಪರಿಷತ್ ಚುನಾವಣೆಯಲ್ಲಿ 5 ರಿಂದ 10 ಕೋ. ರೂ. ಪಡೆದು ಮತ ಮಾರಾಟ ಮಾಡಿದವರೇ, ಈಗ ದಲಿತ ಗುತ್ತಿಗೆದಾರನ 20 ಲ.ರೂ. ಮೌಲ್ಯದ ಸಣ್ಣ ಕಾಮಗಾರಿಗೂ ಕಮೀಷನ್ ಪಡೆಯಲು ಮುಂದಾಗಿರುವುದು ದುರದೃಷ್ಟಕರ. ಕಾಮಗಾರಿ ತಡೆಯುವುದನ್ನು ಮುಂದುವರಿಸಿದರೆ ಸಂಬಂಧಪಟ್ಟ ಅಧಿಕಾರಿಗಳು ಹಾಗು ಶಾಸಕರ ವಿರುದ್ಧ ಲೋಕಾಯುಕ್ತಕ್ಕೆ ದೂರು ಸಲ್ಲಿಸುವುದರ ಜೊತೆಗೆ ಮುಖ್ಯಮಂತ್ರಿ ಕಚೇರಿ ಎದುರು ಸತ್ಯಾಗ್ರಹ ನಡೆಸುವುದಾಗಿ ಎಚ್ಚರಿಕೆ ನೀಡಿದರು.

ಟೆಂಡರ್ ಮಂಜೂರಾದ ಕಾಮಗಾರಿಗಳನ್ನು ಆರಂಭಿಸಲು ಅವಕಾಶ ನೀಡದಿದ್ದರೆ ಅದನ್ನು ಲಿಖಿತವಾಗಿ ತಿಳಿಸಬೇಕು. ಇಲ್ಲವಾದರೆ ತಕ್ಷಣ ಕಾಮಗಾರಿ ಆರಂಭಿಸಲು ಅವಕಾಶ ಕಲ್ಪಿಸಬೇಕು. ಶಿಷ್ಟಾಚಾರ ಹೆಸರಿನಲ್ಲಿ ಕಾಮಗಾರಿಗಳನ್ನು ವಿಳಂಬ ಮಾಡುವುದು ಸರಿಯಲ್ಲ. ತಾಲ್ಲೂಕಿನಲ್ಲಿ ವಿವಿಧ ಅಕ್ರಮ ಚಟುವಟಿಕೆಗಳು ನಡೆಯುತ್ತಿದ್ದು, ಅವುಗಳ ವಿರುದ್ಧ ಕ್ರಮ ಕೈಗೊಳ್ಳುವಲ್ಲಿ ಶಾಸಕರು ವಿಫಲರಾಗಿದ್ದಾರೆ. ಅಕ್ರಮಗಳ ಕುರಿತು ಮೇಲಾಧಿಕಾರಿಗಳು ಹಾಗು ಸರ್ಕಾರದ ಗಮನ ಸೆಳೆಯುವುದಾಗಿ ತಿಳಿಸಿದರು.

**ಗುತ್ತಿಗೆದಾರನ ಅಳಲು**

ಗುತ್ತಿಗೆದಾರ ಲೋಕೇಶ್ ಜಾನೆಕೆರೆ ಅವರು ಮಾತನಾಡಿ, ತಾಲ್ಲೂಕಿನ ಗದ್ದುಪಾಳ್ ಹಳ್ಳಿಯ ತಡೆಗೋಡೆ, ಕುಂಬರಡಿ ಎತ್ತಿನಹಳ್ಳಿ ರಸ್ತೆಯ ತಡೆಗೋಡೆ ಹಾಗು ಹೆತ್ತೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕರ್ಕಳ್ಳಿ ಭಾಗದ ಮೂರು ಕಾಮಗಾರಿಗಳು ತಮಗೆ ಮಂಜೂರಾಗಿದ್ದು, ಇಲಾಖೆಯಿಂದ ಕಾರ್ಯಾದೇಶ ನೀಡಲಾಗಿದೆ. ಆದರೆ, ಗುದ್ದಲಿ ಪೂಜೆ ನಡೆದ ಬಳಿಕವೇ ಕಾಮಗಾರಿ ಆರಂಭಿಸುವಂತೆ ಸೂಚಿಸಲಾಗುತ್ತಿದೆ. ಈ ಕುರಿತು ಹಲವು ಬಾರಿ ಅಧಿಕಾರಿಗಳು ಹಾಗು ಜನಪ್ರತಿನಿಧಿಗಳ ಗಮನಕ್ಕೆ ತಂದಿ

» ನಾಲ್ಕನೇ ಪುಟದಲ್ಲಿ

## ಪಕ್ಷಾಂತರ-ಅಡ್ಡ ಮತದಾನದ ಹಿಂದೆ ಹಣದ ಪ್ರಭಾವ

### ಮಾಜಿ ಶಾಸಕ ಹೆಚ್.ಎಂ.ವಿಶ್ವನಾಥ್ ಆರೋಪ

• ಪ್ರಜೋದಯ ವರದಿ

**ಸಕಲೇಶಪುರ:** ವಿಧಾನಪರಿಷತ್ ಚುನಾವಣೆಯಲ್ಲಿ ಅಡ್ಡ ಮತದಾನದ ಬೆಳವಣಿಗೆಗಳ ಹಿಂದೆ ಹಣದ ಪ್ರಭಾವವಿದೆ. ಈ ಬಗ್ಗೆ ಸಂಬಂಧ ಪಟ್ಟವರೇ ಸತ್ಯ ಬಹಿರಂಗಪಡಿಸಬೇಕೆಂದು ಮಾಜಿ ಶಾಸಕ ಹೆಚ್.ಎಂ.ವಿಶ್ವನಾಥ್ ಅವರು ಆಗ್ರಹಿಸಿ ದರು.

ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ನಡೆದ ಅಡ್ಡ ಮತದಾನದ ಕುರಿತು ಹಲವು ಅನುಮಾನಗಳು ವ್ಯಕ್ತವಾಗಿವೆ. ಹಣದ ವ್ಯವಹಾರ ನಡೆದಿದೆ ಎಂಬ ಆರೋಪಗಳಿದ್ದು, ಬಿಜೆಪಿಯ 63 ಶಾಸಕರು ಈ ಬಗ್ಗೆ ಸ್ಪಷ್ಟನೆ ನೀಡಬೇಕು. ಯಾರಿಗೆ ಹಣ ಬಂದಿದೆ ಎಂಬುದನ್ನು ಬಹಿರಂಗಪಡಿಸಬೇಕು. ಎಲ್ಲರ ಮೇಲೂ ಅನುಮಾನಗಳಿದ್ದು, ಯಾರನ್ನೂ ಹೊರತುಪಡಿಸಲು ಸಾಧ್ಯವಿಲ್ಲ. ಜಿಲ್ಲೆಯಲ್ಲಿಯೂ ಈ ಬೆಳವಣಿಗೆಗಳಿಗೆ ಸಂಬಂಧಿಸಿದವರು ಇದ್ದಾರೆ. ಯಾರೆಂಬುದನ್ನು ನಾನು ಹೇಳುವುದಿಲ್ಲ. ಅದನ್ನು ಮಾಧ್ಯಮಗಳೇ ಪತ್ತೆ ಹಚ್ಚಬೇಕು. ನಮ್ಮ ಜಿಲ್ಲೆಯವರೇ ಈ ಬೆಳವಣಿಗೆಗಳಿಗೆ ನಾಯಕತ್ವ ವಹಿಸಿದ್ದಾರೆಂದು ತಿಳಿಸಿದರು.



ಪ್ರಸ್ತುತ ರಾಜಕೀಯದಲ್ಲಿ ಸಿದ್ಧಾಂತಕ್ಕೆ ಬೆಲೆಯೇ ಇಲ್ಲ. ಮುಂದಿನ ಚುನಾವಣೆಗೆ ಹಣ ಸಂಗ್ರಹಿಸುವುದೇ ಅನೇಕ ಜನಪ್ರತಿನಿಧಿಗಳ ಉದ್ದೇಶವಾಗಿದೆ. ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಅಥವಾ ಇತರೆ ಯಾವುದೇ ಪಕ್ಷವಾಗಲಿ, ಸಿದ್ಧಾಂತಕ್ಕಿಂತ ಸ್ವಾರ್ಥವೇ ಮೇಲುಗೈ ಸಾಧಿಸಿದೆ. 11 ಶಾಸಕರ ನಡೆ ಮುಂದಿನ ಚುನಾವಣೆಗೆ ರಾಜಕೀಯ ನೆಲೆ ಭದ್ರಪಡಿಸಿಕೊಳ್ಳುವ ಉದ್ದೇಶದಿಂದ ನಡೆದ ವ್ಯವಹಾರವಾಗಿದೆ. ಹಣ ನೀಡಲು ಕೆಲವರು ಸಿದ್ಧರಾಗಿದ್ದರೆ, ಪಡೆಯಲು ಕೆಲವರು ಸಿದ್ಧರಾಗಿದ್ದಾರೆ. ಬಳಿಕ ತನಿಖೆ ನಡೆಸುವ ನಾಟಕ ನಡೆಯುತ್ತಿದೆ ಎಂದು ಆರೋಪಿಸಿದರು.

> **ಇಂದು ಯಾರೊಬ್ಬರಿಗೂ ಮತ್ತೊಬ್ಬರ ಮೇಲೆ ನೈತಿಕವಾಗಿ ಆರೋಪ ಮಾಡುವ ಹಕ್ಕು ಉಳಿದಿಲ್ಲ. ಪಕ್ಷಾಂತರ ಮಾಡಿದೆ, ಹಣ ಪಡೆದೆ ಅಥವಾ ಹಣ ಕೊಟ್ಟೆ ಎಂದು ಹೇಳುವ ನೈತಿಕತೆ ರಾಜಕೀಯದಲ್ಲಿ ಕ್ಷೀಣಿಸಿದೆ. ಇದೇ ಇಂದಿನ ರಾಜಕೀಯದ ವಾಸ್ತವ.**
> **-ಹೆಚ್.ಎಂ.ವಿಶ್ವನಾಥ್, ಮಾಜಿ ಶಾಸಕ**

ಪಕ್ಷಾಂತರ ಈಗ ಹೊಸ ವಿಷಯವೇನಲ್ಲ. ಸರ್ಕಾರಗಳೇ ಬದಲಾಗುತ್ತಿವೆ, ಪಕ್ಷಗಳೇ ವಿಲೀನವಾಗುತ್ತಿವೆ. ಇದು ಪಕ್ಷಾಂತರದ ಯುಗವಾಗಿದೆ. ನಾನೂ ಹಿಂದೆ ರಾಜಕೀಯ ವ್ಯವಹಾರಗಳ ಭಾಗವಾಗಿದ್ದೆ. ನಾವು 17 ಮಂದಿ ಸೇರಿ ಕಾಂಗ್ರೆಸ್-ಜೆಡಿಎಸ್ ಸಮ್ಮಿಶ್ರ ಸರ್ಕಾರ ಪತನಕ್ಕೆ ಕಾರಣವಾಗಿದ್ದೇವೆ. ಹೀಗಾಗಿ ಈಗ ಇತರರ ಮೇಲೆ ನೈತಿಕವಾಗಿ ಆರೋಪ ಮಾಡುವ ಹಕ್ಕು ನನಗೂ ಇಲ್ಲವೆಂದು ಅಸಹಾಯಕತೆ ವ್ಯಕ್ತಪಡಿಸಿದರು.

## ಕಾರು ಡಿಕ್ಕಿ: ಇಬ್ಬರು ಯುವಕರ ಸಾವು



**ಬೇಲೂರು:** ಟಿವಿಎಸ್ ಎಕ್ಸೆಲ್‌ಗೆ ಕಾರು ಡಿಕ್ಕಿ ಹೊಡೆದು ಇಬ್ಬರು ಯುವಕರು ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ತಾಲ್ಲೂಕಿನ ತೊಳಲು ಗ್ರಾಮದ ಸಮೀಪ ಮಂಗಳವಾರ ನಡೆದಿದೆ.

ತಾಲ್ಲೂಕಿನ ಮತ್ತಿಹಳ್ಳಿ ಗ್ರಾಮದ ಶರತ್ (21), ಅಶೋಕ (20) ಮೃತರು. ಯುವಕರಿಬ್ಬರು ಟಿವಿಎಸ್ ಎಕ್ಸೆಲ್‌ನಲ್ಲಿ ಚೀಕನಹಳ್ಳಿ ಕಡೆಗೆ ತೆರಳುತ್ತಿದ್ದ ವೇಳೆ ಕಾರು ಡಿಕ್ಕಿ ಹೊಡೆದಿದೆ. ಅಪಘಾತದ ತೀವ್ರತೆಗೆ ಯುವಕರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಅರೇಹಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಗಾಂಜಾ ನಶೆಯಲ್ಲಿ ಮಾರಕಾಸ್ತ್ರಗಳಿಂದ ದಾಳಿಗೆ ಯತ್ನ

- ಟಿಪ್ಪರ್ ಡಿಕ್ಕಿಯಾಗಿ ಕಾರು ಜಖಂ
- ಕ್ರಮ ಕೈಗೊಳ್ಳದ ಪೊಲೀಸರ ವಿರುದ್ಧ ಆಕ್ರೋಶ


• ಪ್ರಜೋದಯ ವರದಿ

**ಆಲೂರು:** ಗಾಂಜಾ ನಶೆಯಲ್ಲಿ ಮಾರಕಾಸ್ತ್ರಗಳಿಂದ ದಾಳಿ ಮಾಡಿರುವ ಮೂವರು ಪುಂಡರು ಟಿಪ್ಪರ್‌ನಿಂದ ಕಾರಿಗೆ ಡಿಕ್ಕಿ ಹೊಡೆಸಿ ಜಖಂಗೊಳಿಸಿದ್ದಲ್ಲದೆ, ಚಾಲಕರ ಮೇಲೆ ಹಲ್ಲೆ ನಡೆಸಿರುವ ಘಟನೆ ತಾಲ್ಲೂಕಿನ ಕೊಡಗಿಹಳ್ಳಿ ಗ್ರಾಮದಲ್ಲಿ ನಡೆದಿದೆ.

ತಾಲ್ಲೂಕಿನ ಕಣತೂರು ಗ್ರಾಮದ ಕೀರ್ತನ್, ಕಿರಣ್ ಹಾಗು ಕೊಡಗಿಹಳ್ಳಿ ಗ್ರಾಮದ ಓಂಕಾರ ಪುಂಡಾಟ ಮೆರೆದಿದ್ದಾರೆ. ಆರೋಪಿಗಳನ್ನು ಠಾಣೆಗೆ ಕರೆ ತಂದ ಪೊಲೀಸರು ಕ್ರಮ ಕೈಗೊಳ್ಳದೆ ವಾಪಾಸ್ ಕಳುಹಿಸಿದ್ದಾರೆಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ದೂರು ನೀಡುವುದಾಗಿ ತಿಳಿಸಿದ್ದಾರೆ.

ನೆರಲಕೆರೆ ಗ್ರಾಮದ ದಿನೇಶ್ ಎಂಬುವವರು ಕೊಡಗಿಹಳ್ಳಿ ಗ್ರಾಮದ ದೇವಾಲಯ ಅಭಿವೃದ್ಧಿಗೆ 50 ಸಾವಿರ ರೂ. ಹಣ ನೀಡಿ, ಕೆರೆ ಮಣ್ಣನ್ನು ಲೇಔಟ್ ಹಾಗು ಗ್ರಾಮದ ಜಮೀನುಗಳಿಗೆ ಒಂದು ತಿಂಗಳಿನಿಂದ ಸಾಗಿಸುತ್ತಿದ್ದಾರೆ. ಸೋಮವಾರ

» ನಾಲ್ಕನೇ ಪುಟದಲ್ಲಿ



**ದೂರು ನೀಡಿದ್ದರೂ ಪೊಲೀಸರ ನಿರ್ಲಕ್ಷ್ಯ**

ಕಳೆದ ಒಂದು ವಾರದಲ್ಲಿ ಈ ಮೂವರು ಗಾಂಜಾ ಅಮಲಿನಲ್ಲಿ ಸಿಕ್ಕ ಸಿಕ್ಕವರ ಮೇಲೆ ಹಲ್ಲೆ ನಡೆಸಿದ್ದು, ಪೊಲೀಸರಿಗೆ ದೂರು ನೀಡಿದರೂ ಕ್ರಮ ಕೈಗೊಂಡಿಲ್ಲವೆಂದು ಗ್ರಾಮಸ್ಥರು ದೂರಿದ್ದಾರೆ. ದಿನೇಶ್ ಹಾಗು ಗಂಗಾಧರ್ ಆಲೂರು ಪೊಲೀಸ್ ಠಾಣೆಗೆ ಪ್ರತ್ಯೇಕ ದೂರು ನೀಡಿದ್ದಾರೆ. ಪದೇ ಪದೇ ಮೂವರು ಕಿಡಿಗೇಡಿಗಳು ಗಾಂಜಾ ನಶೆಯಲ್ಲಿ ತೊಂದರೆ ನೀಡುತ್ತಿದ್ದು, ಪೊಲೀಸರು ಸೂಕ್ತ ಕ್ರಮ ಕೈಗೊಂಡು ಪುಂಡರ ಅಟ್ಟಹಾಸಕ್ಕೆ ಕಡಿವಾಣ ಹಾಕಬೇಕು. ಇಲ್ಲವಾದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿ ಎದುರು ಅನಿರ್ದಿಷ್ಟಾವಧಿ ಧರಣಿ ನಡೆಸುವುದಾಗಿ ಎಚ್ಚರಿಸಿದ್ದಾರೆ.

## ಪಶುಪಾಲನಾ ಇಲಾಖೆಯಿಂದ ಕ್ರಮ | ನಿಗಾ ವಹಿಸಲು ಪಶು ಸಖಿಯರಿಗೆ ನಿರ್ದೇಶನ

# ಜಾನುವಾರು ಕಳವು ತಡೆಗೆ ಎಫ್‌ಐಆರ್ ಅಸ್ತ್ರ

-ಮಲ್ಲಿಕಾರ್ಜುನ ಕೊಚ್ಚರಗಿ

• ಪ್ರಜೋದಯ ವರದಿ

**ಹಾಸನ:** ನಗರ ಸೇರಿ ಜಿಲ್ಲಾದ್ಯಂತ ನಡೆಯುತ್ತಿರುವ ಹಸು ಸೇರಿ ಇತರ ಮೂಕ ಪ್ರಾಣಿಗಳ ಕಳವು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಪಶುಪಾಲನಾ ಇಲಾಖೆ ಸ್ವಯಂ ಪ್ರೇರಿತ ದೂರು ದಾಖಲಿಸಲು ಮುಂದಾಗಿದೆ.

ನಗರದ ವಿದ್ಯಾ ನಗರದಲ್ಲಿ ಇತ್ತೀಚೆಗೆ ಹೆಲ್ಮೆಟ್ ಧರಿಸಿದ ಮುಸುಕುಧಾರಿಯೊಬ್ಬ ಗರ್ಭಿಣಿ ಹಸುವನ್ನು ಕದ್ದೊಯ್ಯುತ್ತಿರುವುದು ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿತ್ತು. ಈ ಸಂಬಂಧ ಹಸುವಿನ ವಾರಸುದಾರರು ಪತ್ತೆಗೆ ಮನವಿ ಮಾಡಿಕೊಂಡಿದ್ದರ ಸುದ್ದಿ ಎಲ್ಲೆಡೆ ಹರಿದಾಡುತ್ತಿದ್ದಂತೆ ಎಚ್ಚೆತ್ತುಕೊಂಡಿದ್ದ ಕಳ್ಳ ಬೂದೇಶ್ವರ ಮಠದ ಆವರಣದಲ್ಲಿ ಹಸು ಬಿಟ್ಟು ಪರಾರಿಯಾಗಿದ್ದ. ಆದರೆ, ಎರಡೇ ದಿನದಲ್ಲಿ ಹಸು ಮೃತಪಟ್ಟಿದೆ. ದುರುದ್ದೇಶದಿಂದ ಆತ ಹಸುವಿಗೆ ವಿಷ ಬೆರೆಸಿದ್ದ ಎಂದು ವಾರಸುದಾರರಾದ ಸುಶೀಲಮ್ಮ ಅವರು ಆರೋಪಿಸಿದ್ದಾರೆ. ಹಾಸನದ ಪಶು ವೈದ್ಯಕೀಯ ಕಾಲೇಜಿನಲ್ಲಿ ಮರಣೋತ್ತರ ಪರೀಕ್ಷೆ ನಡೆದಿದ್ದು, ವರದಿಗಾಗಿ ಅಧಿಕಾರಿಗಳು ಕಾಯುತ್ತಿದ್ದಾರೆ.

ಚನ್ನರಾಯಪಟ್ಟಣ ತಾಲ್ಲೂಕಿನ ಸುಂಡೇನಹಳ್ಳಿಯಲ್ಲೂ ನಾಲ್ಕು ದಿನಗಳ ಹಿಂದಷ್ಟೇ 4 ಟಗರು, ಮೇಕೆಗಳನ್ನು ಕಳವು ಮಾಡಲಾಗಿದೆ. ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿರುವ ಪಶುಪಾಲನಾ ಇಲಾಖೆ ಉಪನಿರ್ದೇಶಕ ಬಿ.ಕೆ.ರಮೇಶ್ ಅವರು ಪಶು ಚಿಕಿತ್ಸಾಲಯ ವ್ಯಾಪ್ತಿಯಲ್ಲಿ ಜಾನುವಾರುಗಳ ಕಳುವಾದರೆ ತಾಲ್ಲೂಕು ಸಹಾಯಕ ನಿರ್ದೇಶಕರಿಂದಲೇ ಎಫ್‌ಐಆರ್ ದಾಖಲಿಸಲು ಚಿಂತನೆ ನಡೆಸಿದ್ದಾರೆ. ಈ ಸಂಬಂಧ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ನೇಮಕವಾಗಿರುವ ಪಶು ಸಖಿಯರಿಗೆ ನಿರ್ದೇಶನ ನೀಡುವಂತೆ ಅಧೀನ ಅಧಿಕಾರಿಗಳಿಗೆ ಸೂಚಿಸಿದ್ದಾರೆ.



> **ಹಾಸನದಲ್ಲಿ ಜಾನುವಾರು ಕಳವು ಪ್ರಕರಣ ದಿನದಿಂದ ದಿನಕ್ಕೆ ಹೆಚ್ಚುತ್ತಿವೆ. ಗ್ರಾಮೀಣ ಭಾಗದಲ್ಲಿ ಪಶು ಚಿಕಿತ್ಸಾ ಕೇಂದ್ರಗಳ ಮೂಲಕ ಮಾಹಿತಿ ತರಿಸಿಕೊಳ್ಳಲಾಗುತ್ತಿದೆ. ಎಮ್ಮೆ, ಹಸು ಸೇರಿ ಯಾವುದೇ ಪ್ರಾಣಿ ಕಳುವಾದರೂ ಹತ್ತಿರದ ಪೊಲೀಸ್ ಠಾಣೆಗೆ ದೂರು ನೀಡುವಂತೆ ಅಧೀನ ಅಧಿಕಾರಿಗಳಿಗೆ ನಿರ್ದೇಶನ ನೀಡುತ್ತೇನೆ. ವಿಳಂಬ ಮಾಡದೆ ದೂರು ದಾಖಲಿಸಿಕೊಳ್ಳುವಂತೆ ಪೊಲೀಸರಿಗೆ ಸೂಚನೆ ನೀಡುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ಪತ್ರದ ಮೂಲಕ ಮನವಿ ಮಾಡುತ್ತೇನೆ.**
> **-ಬಿ.ಕೆ.ರಮೇಶ್, ಪಶುಪಾಲನಾ ಇಲಾಖೆ ಉಪನಿರ್ದೇಶಕ**



**ಸಾಕ್ಷಿ ಕೇಳುವ ಪೊಲೀಸರು**

ಜಾನುವಾರು ಕಳವು ಸಂಬಂಧ ದೂರು ನೀಡಲು ಪೊಲೀಸ್ ಠಾಣೆಗೆ ತೆರಳಿದರೆ ಸಾಕ್ಷಿ ಇಲ್ಲದೆ ಪ್ರಕರಣ ದಾಖಲಿಸುವುದಿಲ್ಲವೆಂದು ಪೊಲೀಸರು ಹೇಳುತ್ತಾರೆ. ಸಿಸಿಟಿವಿ ದೃಶ್ಯಾವಳಿಯನ್ನು ಸಾಬೀತುಪಡಿಸಿದ ನಂತರವೇ ಪ್ರಕರಣ ದಾಖಲಿಸುವ ಪ್ರಕ್ರಿಯೆ ಇದೆ. ಎಲ್ಲಾ ಪ್ರಕರಣಗಳಲ್ಲೂ ಸಿಸಿಟಿವಿ ಕ್ಯಾಮರಾ ದೃಶ್ಯಾವಳಿ ಇರುವುದಿಲ್ಲ. ಆದ್ದರಿಂದ ಸಮಸ್ಯೆಗೆ ಬೇರೆ ಮಾರ್ಗ ಕಂಡುಕೊಳ್ಳಬೇಕೆಂಬ ಆಗ್ರಹ ಕೇಳಿಬಂದಿತ್ತು.

**ವಿಮೆ, ಕಿವಿಯೋಲೆ ಹಾಕಿಸಲು ಸೂಚನೆ**

ಜಾನುವಾರುಗಳಿಗೆ ಕಿವಿಯೋಲೆ ಹಾಗು ವಿಮೆ ಮಾಡಿಸುವಂತೆ ಅಧಿಕಾರಿಗಳು ರೈತರಿಗೆ ಸೂಚನೆ ನೀಡಿದ್ದಾರೆ. ಪಶು ಸಂಗೋಪನಾ ಇಲಾಖೆಯಿಂದ ನೀಡಲಾಗುವ ಕಿವಿಯೋಲೆಯಿಂದ ಹಸು ಎಲ್ಲೇ ಇದ್ದರೂ ಪತ್ತೆ ಮಾಡಬಹುದು. ಅದರಲ್ಲಿ 12 ಡಿಜಿಟ್ ಸಂಖ್ಯೆ, ಬಾರ್ ಕೋಡ್ ಇರುವುದರಿಂದ ರಾಸು ಎಲ್ಲೇ ಇದ್ದರೂ ಪತ್ತೆಯಾಗುತ್ತದೆ. ಆದ್ದರಿಂದ ಎಲ್ಲರೂ ಕಡ್ಡಾಯವಾಗಿ ಓಲೆ ಹಾಕಿಸಬೇಕೆಂದು ಅಧಿಕಾರಿಗಳು ಮನವಿ ಮಾಡಿದ್ದಾರೆ.

ಜೊತೆಗೆ ವಿಮೆ ಇದ್ದರೂ ಅನುಕೂಲವಾಗುತ್ತದೆ. ಹಸು ಕಳುವಾದರೆ ವಿಮೆ ಮೊತ್ತ ಪಾವತಿಯಾಗುವುದಿಲ್ಲ. ಒಂದು ವೇಳೆ ಅನಾರೋಗ್ಯ ಅಥವಾ ಮತ್ತಿತರ ಕಾರಣಗಳಿಂದ ಮೃತಪಟ್ಟರೆ 15 ಸಾವಿರ ರೂ. ವರೆಗೆ

» ನಾಲ್ಕನೇ ಪುಟದಲ್ಲಿ




ರಾಜ್ಯ ಸರ್ಕಾರದಿಂದ
ಐತಿಹಾಸಿಕ ನಿರ್ಧಾರ
ವಿದ್ಯಾರ್ಥಿಗಳ ಅಕ್ಷರ
ಸಾಧನೆಗೆ ಸಹಕಾರ
KARNATAKA STATE ROAD TRANSPORT CORPORATION
APPLICATION FOR STUDENT PASS
ಶಾಲೆ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ
ಉಚಿತ ಬಸ್ ಪಾಸ್!
ಕೆಎಸ್ಆರ್‌ಟಿಸಿ, ಬಿಎಂಟಿಸಿ, ಕೆಕೆಆರ್‌ಟಿಸಿ, ಎನ್‌ಡಬ್ಲ್ಯುಕೆಆರ್‌ಟಿಸಿ ಬಸ್‌ಗಳಲ್ಲಿ ಅನ್ವಯ
ಕರ್ನಾಟಕ ನವ ನಿರ್ಮಾಣಕ್ಕೆ
ಗ್ಯಾರಂಟಿ ಸರ್ಕಾರ...
ಗಡಿಭಾಗದ ವಿದ್ಯಾರ್ಥಿಗಳಿಗೂ
ಉಚಿತ ಬಸ್ ಪಾಸ್ ಸೌಲಭ್ಯ
ಹಣ ಪಾವತಿಸಿದವರಿಗೆ
15 ದಿನಗಳಲ್ಲಿ ಹಣ ವಾಪಸ್
ಇಂದೇ ಆನ್‌ಲೈನ್‌ನಲ್ಲಿ
ಅರ್ಜಿ ಸಲ್ಲಿಸಿ!
ಸೇವಾಸಿಂಧು ಪೋರ್ಟಲ್ ಲಿಂಕ್
https://sevasindhuservices.
karnataka.gov.in/buspasservices/
ಕೆಎಸ್‌ಆರ್‌ಟಿಸಿ ವಿದ್ಯಾರ್ಥಿ ಪಾಸ್ ವಿವರಗಳು
https://ksrtc.karnataka.gov.in/studentpass
ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಗ್ಗಿಕೊಳ್ಳುವ
ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ
CMofKarnataka https://dipr.karnataka.gov.in/
ಕರ್ನಾಟಕ ವಾರ್ತೆ
ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಹಿಂದುಳಿದ ವರ್ಗ / ಬ್ರಾಹ್ಮಣ ಸಮುದಾಯಗಳ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು

# ವಿಶ್ವಾಸ ದ್ರೋಹಿಗಳ ಉಚ್ಚಾಟಿಸಲು ರಾಜ್ಯ ನಾಯಕರ ಮನವಿ

## ಬಿಜೆಪಿ ರಾಷ್ಟ್ರಾಧ್ಯಕ್ಷರಿಗೆ ವರದಿ ಸಲ್ಲಿಕೆ | ಕಠಿಣ ಕ್ರಮದ ಭರವಸೆ

• ಪ್ರಜೋದಯ ವರದಿ

**ಬೆಂಗಳೂರು:** ವಿಧಾನಸಭೆಯಿಂದ ವಿಧಾನ ಪರಿಷತ್‌ಗೆ ನಡೆದ ಚುನಾವಣೆಯಲ್ಲಿ ಅಡ್ಡ ಮತದಾನ ಮಾಡಿದ ಶಾಸಕರನ್ನು ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದಲೇ ಉಚ್ಚಾಟಿಸುವಂತೆ ರಾಷ್ಟ್ರೀಯ ನಾಯಕರಿಗೆ ರಾಜ್ಯ ಬಿಜೆಪಿ ಘಟಕ ಮನವಿ ಮಾಡಿದೆ.

ನವದೆಹಲಿಯಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಅವರನ್ನು ಭೇಟಿ ಮಾಡಿದ ಬಿಜೆಪಿ ರಾಜ್ಯಾಧ್ಯಕ ಬಿ.ವೈ.ವಿಜಯೇಂದ್ರ, ರಾಜ್ಯ ಉಸ್ತುವಾರಿ ಡಾ.ಮೋಹನ್‌ದಾಸ್ ಅಗರ್‌ವಾಲ್, ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ವಿಧಾನಮಂಡಲದ ಉಭಯ ಸದನಗಳ ಮುಖ್ಯ ಸಚೇತಕ ದೊಡ್ಡನಗೌಡ ಪಾಟೀಲ್ ಹಾಗು ಎನ್. ರವಿಕುಮಾರ್ ಅವರು ವಸ್ತುಸ್ಥಿತಿ ವಿವರಿಸಿದ್ದಾರೆ.

ಕಳೆದ ಗುರುವಾರ ವಿಧಾನಸಭೆಯಿಂದ ವಿಧಾನ ಪರಿಷತ್ತಿಗೆ ನಡೆದ ಏಳು ಸ್ಥಾನಗಳ ಚುನಾವಣೆಯಲ್ಲಿ ಬಿಜೆಪಿಯಿಂದ ಸುಮಾರು 4 ರಿಂದ 5 ಶಾಸಕರು ಪಕ್ಷದ ವಿಪ್ ಉಲ್ಲಂಘಿಸಿ ಕಾಂಗ್ರೆಸ್ ಅಭ್ಯರ್ಥಿಗೆ ಮತ ಚಲಾಯಿಸಿದ್ದಾರೆಂದು ರಾಷ್ಟ್ರೀಯ ಅಧ್ಯಕ್ಷರಿಗೆ ತಮ್ಮದೇ ಮೂಲದಿಂದ ಸಂಗ್ರಹಿಸಿದ ಪ್ರಾಥಮಿಕ ವರದಿಯನ್ನು ನೀಡಿದ್ದಾರೆ.

ಈ ಪ್ರಕರಣ ಕುರಿತು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ನೇತೃತ್ವದಲ್ಲಿ ಮೂವರ ತಂಡ



ವನ್ನು ರಚಿಸಿದೆ. ಸಮಿತಿಯೂ ಇದೇ 25ರಂದು ವರದಿ ನೀಡಲಿದ್ದು ಕೆಲವು ಅನುಮಾನಾಸ್ಪದ ಶಾಸಕರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳ ಬೇಕೆಂದು ರಾಜ್ಯ ಘಟಕ ಒತ್ತಾಯ ಮಾಡಿದೆ.

ಇದು ಪಕ್ಷದ ಶಿಸ್ತಿನ ಉಲ್ಲಂಘನೆ ಮತ್ತು ನಂಬಿಕೆ ದ್ರೋಹ ಎಂದು ಆಕ್ರೋಶ ವ್ಯಕ್ತಪಡಿಸಿದ್ದು, ಅಡ್ಡ ಮತದಾನದ ಸಂಪೂರ್ಣ ವರದಿಯನ್ನು ವರಿಷ್ಠರಿಗೆ ರವಾನಿಸಿದೆ. ರಾಜ್ಯದ ನಾಯಕರು ದೆಹಲಿಯ ರಾಷ್ಟ್ರೀಯ ನಾಯಕರಿಗೆ ಸಂಬಂಧಪಟ್ಟ ಶಾಸಕರ ವಿರುದ್ಧ ಕಠಿಣ ಶಿಸ್ತು ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದಾರೆ.

ಕೇವಲ ಅಮಾನತು ಅಥವಾ ನೋಟೀಸ್ ನೀಡಿದರೆ ಸಾಲದು. ಪಕ್ಷದ ಪ್ರಾಥಮಿಕ ಸದಸ್ಯತ್ವ ದಿಂದಲೇ ಅವರನ್ನು ಉಚ್ಚಾಟಿಸಬೇಕೆಂದು ರಾಜ್ಯ ನಾಯಕರು ಹೈಕಮಾಂಡ್ ಮೇಲೆ ಒತ್ತಡ ಹೇರಿದ್ದಾರೆ. ಅಡ್ಡ ಮತದಾನ ಮಾಡಿದವರಿಗೆ ತಕ್ಕ ಪಾಠ ಕಲಿಸದಿದ್ದರೆ ಮುಂದಿನ ದಿನಗಳಲ್ಲಿ ಪಕ್ಷದ ಶಿಸ್ತಿಗೆ ಧಕ್ಕೆ ಉಂಟಾಗಲಿದೆ ಎಂಬುದು ಅವರ ವಾದವಾಗಿದೆ.

ಪಕ್ಷದ ವೇದಿಕೆಯಲ್ಲಿ ಅಥವಾ ಸಭೆಗಳಲ್ಲಿ ಚರ್ಚಿಸದೆ, ನೇರವಾಗಿ ಚುನಾವಣೆ ಸಂದರ್ಭದಲ್ಲಿ ಪಕ್ಷದ ವಿರುದ್ಧವಾಗಿ ನಡೆದುಕೊಂಡಿರುವುದು ಶಿಸ್ತು ಉಲ್ಲಂಘನೆಯಾಗುತ್ತದೆ. ಈ ವಿಚಾರವು ಈಗ ರಾಷ್ಟ್ರೀಯ ನಾಯಕರ ಅಂಗಳದಲ್ಲಿದೆ. ಅಡ್ಡ ಮತದಾನ ಮಾಡಿದ ಶಾಸಕರಿಗೆ ನೋಟೀಸ್ ಜಾರಿ ಮಾಡುವುದೇ ಅಥವಾ ತಕ್ಷಣದ ಉಚ್ಚಾಟನೆ ಕೈಗೊಳ್ಳುವುದೇ ಎಂಬುದನ್ನು ವರಿಷ್ಠರು ನಿರ್ಧರಿಸಲಿದ್ದಾರೆ.

ಪಕ್ಷದ ವರಿಷ್ಠರು ಈ ವಿಷಯದಲ್ಲಿ ಜೀರೋ ಟಾಲರೆನ್ಸ್ ನೀತಿಯನ್ನು ಅನುಸರಿಸಲು ಮುಂದಾಗಿರುವುದರಿಂದ ಅಡ್ಡ ಮತದಾನ ಮಾಡಿದ ಶಾಸಕರಲ್ಲಿ ಈಗ ನಡುಕ ಶುರುವಾಗಿದೆ.

ದೆಹಲಿ ನಾಯಕರು ಯಾವ ಕ್ಷಣದಲ್ಲಿ ಏನಾದರೂ ಕಠಿಣ ನಿರ್ಧಾರ ಕೈಗೊಳ್ಳಬಹುದೆಂಬ ಆತಂಕದಲ್ಲಿ ಆ ಶಾಸಕರಿದ್ದಾರೆ. ಪಕ್ಷದ ತೀರ್ಮಾನವು ಅಂತಿಮವಾಗಿದ್ದು, ಅಡ್ಡ ಮತದಾನ ಮಾಡಿದ ಶಾಸಕರು ತಮ್ಮ ಶಾಸಕ ಸ್ಥಾನಕ್ಕೆ ಅಥವಾ ಮುಂದಿನ ರಾಜಕೀಯ ಭವಿಷ್ಯಕ್ಕೆ ಕುತ್ತು ಬರುವ ಆತಂಕದಲ್ಲಿದ್ದಾರೆ.

ರಾಜ್ಯ ಘಟಕವು ಈ ಮೂಲಕ ಭವಿಷ್ಯದಲ್ಲಿ ನಡೆಯುವ ಚುನಾವಣೆಗಳಲ್ಲಿ ಯಾವುದೇ ರೀತಿಯ ಒಳಜಗಳ ಅಥವಾ ಪಕ್ಷ ವಿರೋಧಿ ಚಟುವಟಿಕೆಗಳಿಗೆ ಅವಕಾಶ ನೀಡುವುದಿಲ್ಲ ಎಂಬ ಕಠಿಣ ಸಂದೇಶವನ್ನು ರವಾನಿಸಲು ಪ್ರಯತ್ನಿಸುತ್ತಿದೆ. ಈ ಪ್ರಕರಣದಲ್ಲಿ ಮುಂದೆ ರಾಷ್ಟ್ರೀಯ ನಾಯಕತ್ವವು ಕೈಗೊಳ್ಳುವ ನಿರ್ಧಾರವು ರಾಜ್ಯ ಬಿಜೆಪಿಯ ಆಂತರಿಕ ಸಮೀಕರಣದ ಮೇಲೆ ಪರಿಣಾಮ ಬೀರಲಿದೆ.

ಈ ಪ್ರಕರಣವು ಇದೀಗ ಹೈಕಮಾಂಡ್ ಅಂಗಳದಲ್ಲಿದೆ. ಬಿಜೆಪಿ ರಾಷ್ಟ್ರೀಯ ನಾಯಕರು ಶಾಸಕರಿಗೆ ನೋಟೀಸ್ ನೀಡುತ್ತಾರೋ ಅಥವಾ ನೇರವಾಗಿ ಉಚ್ಚಾಟನೆಯಂತಹ ಅಂತಿಮ ನಿರ್ಧಾರ ಕೈಗೊಳ್ಳುತ್ತಾರೋ ಎಂಬುದನ್ನು ಕಾದು ನೋಡಬೇಕಿದೆ. ರಾಜ್ಯ ರಾಜಕೀಯದಲ್ಲಿ ಈ ಘಟನೆಯು ಶಿಸ್ತು ಮತ್ತು ಪಕ್ಷ ನಿಷ್ಠೆಯ ಬಗ್ಗೆ ದೊಡ್ಡ ಚರ್ಚೆ ಹುಟ್ಟು ಹಾಕಿದೆ.

# ನಟ ಮಮ್ಮುಟ್ಟಿ, ಅಮೃತ್‌ರಾಜ್‌ಗೆ ಪದ್ಮ ಪ್ರಶಸ್ತಿ

• ಪ್ರಜೋದಯ ವರದಿ



**ನವದೆಹಲಿ:** ಟೆನಿಸ್ ದಂತಕಥೆ ವಿಜಯ್ ಅಮೃತ್‌ರಾಜ್, ಮಲಯಾಳ ನಟ ಮಮ್ಮುಟ್ಟಿ, ಖ್ಯಾತ ಹಿನ್ನೆಲೆ ಗಾಯಕಿ ಅಲ್ಕಾ ಯಾಜ್ಞಿಕ್ ಸೇರಿ 65 ಗಣ್ಯರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮಂಗಳವಾರ ಪದ್ಮ ಪ್ರಶಸ್ತಿ ಪ್ರದಾನ ಮಾಡಿದ್ದಾರೆ.

ರಾಷ್ಟ್ರಪತಿ ಭವನದ ಗಣತಂತ್ರ ಮಂಟಪದಲ್ಲಿ ನಡೆದ ನಾಗರಿಕ ಪ್ರಶಸ್ತಿ ಪ್ರದಾನ ಸಮಾರಂಭ ದಲ್ಲಿ ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಕೇರಳದ ಕೆ.ಟಿ.ಥಾಮಸ್ (ಸಾರ್ವಜನಿಕ ವ್ಯವಹಾರ), ಹಿರಿಯ ಪತ್ರಕರ್ತ ಕೇರಳದ ಪಿ.ನಾರಾಯಣನ್ (ಸಾಹಿತ್ಯ ಮತ್ತು ಶಿಕ್ಷಣ) ಅವರಿಗೆ ಪದ್ಮವಿಭೂಷಣ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಈ ಸಮಾರಂಭದಲ್ಲಿ ಮಮ್ಮುಟ್ಟಿ, ಅಲ್ಕಾ ಯಾಜ್ಞಿಕ್, ಅಮೇರಿಕಾದ ಪ್ರಖ್ಯಾತ ಕ್ಯಾನ್ಸರ್ ತಜ್ಞ (ಆಂಕೊಲಾಜಿಸ್ಟ್) ದತ್ತಾತ್ರೇಯಡು ನೋರಿ, ಟೆನಿಸ್ ಆಟಗಾರ ವಿಜಯ್ ಅಮೃತ್‌ರಾಜ್, ಉದ್ಯಮಿ ಎಸ್. ಕೆ.ಎಂ.ಮೈಲಾನಂದನ್ ಮತ್ತು ಸಾಮಾಜಿಕ ಕಾರ್ಯಕರ್ತ ಹಾಗೂ ಶಿಕ್ಷಣ ತಜ್ಞ ವೆಲ್ಲಪಳ್ಳಿ ನಟೇಶನ್ ಅವರು ಮುರ್ಮು ಅವರಿಂದ ಪದ್ಮಭೂಷಣ ಪ್ರಶಸ್ತಿ ಸ್ವೀಕರಿಸಿದ್ದಾರೆ.

ಜೆಎಂಎಂ ಸ್ಥಾಪಕ ಮತ್ತು ಜಾರ್ಖಂಡ್‌ನ ಮಾಜಿ ಮುಖ್ಯಮಂತ್ರಿ ಶಿಬು ಸೊರೇನ್ ಅವರ ಪರವಾಗಿ ಅವರ ಪತ್ನಿ ರೂಪಿ ಸೊರೇನ್ ಅವರು ಪದ್ಮಭೂಷಣ ಪ್ರಶಸ್ತಿ ಪಡೆದುಕೊಂಡಿದ್ದಾರೆ.ಗಣರಾಜ್ಯೋತ್ಸವದ ಮುನ್ನಾದಿನದಂದು ಕೇಂದ್ರ ಸರ್ಕಾರವು ಪದ್ಮವಿಭೂಷಣ ಸೇರಿ 2026ನೇ ಸಾಲಿನ ಒಟ್ಟು 131 ಪದ್ಮ ಪ್ರಶಸ್ತಿಗಳನ್ನು ಘೋಷಿಸಿತ್ತು.

ಮೇ 25ರಂದು ನಡೆದ ಮೊದಲ ನಾಗರಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮುರ್ಮು ಅವರು ಎರಡು ಪದ್ಮವಿಭೂಷಣ, ಆರು ಪದ್ಮಭೂಷಣ ಮತ್ತು 57 ಪದ್ಮಶ್ರೀ ಸೇರಿ ಒಟ್ಟು 65 ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಿದ್ದರು.

ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಲ್ಲಿ ಒಂದಾದ ಪದ್ಮ ಪ್ರಶಸ್ತಿಗಳನ್ನು ಪದ್ಮವಿಭೂಷಣ, ಪದ್ಮಭೂಷಣ ಮತ್ತು ಪದ್ಮಶ್ರೀ ಎಂಬ ಮೂರು ವಿಭಾಗಗಳಲ್ಲಿ ನೀಡಲಾಗುತ್ತದೆ.

ಕಲೆ, ಸಾಮಾಜಿಕಕಾರ್ಯ, ಸಾರ್ವಜನಿಕ ವ್ಯವಹಾರ, ವಿಜ್ಞಾನ ಮತ್ತು ತಂತ್ರಜ್ಞಾನ, ವ್ಯಾಪಾರ ಮತ್ತು ಕೈಗಾರಿಕೆ, ವೈದ್ಯಕೀಯ, ಸಾಹಿತ್ಯ ಮತ್ತು ಶಿಕ್ಷಣ, ಕ್ರೀಡೆ, ನಾಗರಿಕ ಸೇವೆ ಮುಂತಾದ ವಿವಿಧ ಕ್ಷೇತ್ರಗಳಲ್ಲಿನ ಅಸಾಧಾರಣ ಸಾಧನೆಗಾಗಿ ಈ ಪ್ರಶಸ್ತಿಗಳನ್ನು ನೀಡಲಾಗುತ್ತದೆ.

ಈ ಬಾರಿ ಪ್ರಶಸ್ತಿ ಪುರಸ್ಕೃತರಲ್ಲಿ 19 ಮಹಿಳೆಯರು ಮತ್ತು ಆರು ಮಂದಿ ಅನಿವಾಸಿ ಭಾರತೀಯರು ಸೇರಿದ್ದಾರೆ. 16 ಮಂದಿಗೆ ಮರಣೋತ್ತರವಾಗಿ ಪ್ರಶಸ್ತಿ ನೀಡಲಾಗಿದೆ. ಹಲವಾರು ಬುಡಕಟ್ಟು ಜನಾಂಗದವರು, ಸಾಂಪ್ರದಾಯಿಕ ಔಷಧಿ ನೀಡುವವರು, ಕಲಾ ಸಾಧಕರು ಪ್ರಶಸ್ತಿ ಪುರಸ್ಕೃತರಲ್ಲಿ ಸೇರಿದ್ದಾರೆ.

# ಪ್ರತ್ಯೇಕ ಅಪಘಾತ: ಮೂವರ ಸಾವು-ಇಬ್ಬರಿಗೆ ಗಾಯ

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯ ಚನ್ನರಾಯಪಟ್ಟಣ ಸಂಚಾರ ಠಾಣೆ, ಬಾಣಾವರ ಹಾಗು ಗಂಡಸಿ ಠಾಣಾ ವ್ಯಾಪ್ತಿಯಲ್ಲಿ ನಡೆದ ಪ್ರತ್ಯೇಕ ರಸ್ತೆ ಅಪಘಾತದಲ್ಲಿ ಮೂವರು ಮೃತಪಟ್ಟು ಇಬ್ಬರು ಗಾಯ ಗೊಂಡಿರುವ ಘಟನೆ ನಡೆದಿದೆ.

ಗೂಡ್ಸ್ ಆಟೋ ಡಿಕ್ಕಿಯಾಗಿ ಸ್ಕೂಟರ್ ಸವಾರ ಮೃತಪಟ್ಟಿರುವ ಘಟನೆ ಚನ್ನರಾಯಪಟ್ಟಣ ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ 75ರ ಅನಘ ಹೋಟೆಲ್ ಸಮೀಪ ನಡೆದಿದೆ. ನಾಗಮಂಗಲ ತಾಲ್ಲೂಕು ಕೆ.ಮಲ್ಲೇನಹಳ್ಳಿ ಗ್ರಾಮದ ದಿನೇಶ್ (45) ಮೃತರು. ಸ್ನೇಹಿತ ವಿಶ್ವನಾಥ್ ಅವರೊಂದಿಗೆ ಸೋಮವಾರ ಹಾಸನದಿಂದ ಚನ್ನರಾಯ ಪಟ್ಟಣಕ್ಕೆ ಹೋಗುತ್ತಿದ್ದಾಗ ಎದುರು ಗಡೆಯಿಂದ ವೇಗವಾಗಿ ಬಂದ ಗೂಡ್ಸ್ ವಾಹನ ಡಿಕ್ಕಿಯಾಗಿದೆ. ಅಪ ಘಾತದ ರಭಸಕ್ಕೆ ಇಬ್ಬರೂ ನೆಲದ ಮೇಲೆ ಬಿದ್ದಿದ್ದಾರೆ. ಗಂಭೀರ ಗಾಯಗೊಂಡಿದ್ದ ಅವರನ್ನು ಆಸ್ಪತ್ರೆಗೆ ದಾಖಲಿಸಲಾಯಿ ತಾದರೂ ದಿನೇಶ್ ಮೃತಪಟ್ಟಿದ್ದಾರೆ. ಚನ್ನರಾಯಪಟ್ಟಣ ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಪಾದಚಾರಿಗೆ ಬೈಕ್ ಡಿಕ್ಕಿಯಾಗಿ ಸವಾರ ಮೃತಪಟ್ಟಿರುವ ಘಟನೆ ಬಾಣಾವರ ಸಮೀಪ ನಡೆದಿದೆ. ಕರಡಿಹಳ್ಳಿ ಗ್ರಾಮದ ಮಹೇಶ್ವರಪ್ಪ ಮೃತರು. ಜೂ.21 ರ ಸಂಜೆ 6 ಗಂಟೆ ಸಮಯದಲ್ಲಿ ಬಾಣಾವರದಿಂದ ಕರಡಿಹಳ್ಳಿಗೆ ಬೈಕ್‌ನಲ್ಲಿ ಹೋಗುತ್ತಿದ್ದಾಗ ನಿರ್ಲಕ್ಷ್ಯದ ಚಾಲನೆ ಪರಿಣಾಮ ರಸ್ತೆಯ ಎಡಬದಿಗೆ ಹೋಗುತ್ತಿದ್ದ ಮಹಂತೇಶ್ ಎಂಬುವ ವರಿಗೆ ಡಿಕ್ಕಿಯಾಗಿದೆ. ಬೈಕ್ ಮೇಲಿಂದ ಕೆಳಗೆ ಬಿದ್ದಿದ್ದರಿಂದ ತಲೆ ಹಾಗು ಬಲಗೈಗೆ ಬಲವಾದ ಪೆಟ್ಟು ಬಿದ್ದಿದೆ. ಪಾದಚಾರಿ ಮಹಂತೇಶ್ ಅವರಿಗೂ ಗಾಯಗಳಾಗಿವೆ. ಗಂಭೀರ ಗಾಯ ಗೊಂಡಿದ್ದ ಮಹೇಶ್ವರಪ್ಪ ಅವರನ್ನು ಚಿಕಿತ್ಸೆಗಾಗಿ ಬೆಂಗಳೂರಿನ ಆಸ್ಪತ್ರೆಗೆ ಕರೆದೊಯ್ಯುತ್ತಿದ್ದಾಗ ಮಾರ್ಗ ಮಧ್ಯೆ ಮೃತಪಟ್ಟಿದ್ದಾರೆ. ಬಾಣಾವರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಟ್ರ್ಯಾಕ್ಟರ್ ಚಾಲಕ ಸಾವು**

ನಿರ್ಲಕ್ಷ್ಯದ ಚಾಲನೆಯಿಂದ ಟ್ರ್ಯಾಕ್ಟರ್ ನಿಯಂತ್ರ ಣಕ್ಕೆ ಸಿಗದೆ ಪಲ್ಟಿಯಾಗಿ ಚಾಲಕ ಮೃತ ಪಟ್ಟಿರುವ ಘಟನೆ ಅರಸೀಕೆರೆ ತಾಲ್ಲೂಕು ಗೊಲ್ಲರಹಳ್ಳಿ ಗ್ರಾಮದಲ್ಲಿ ಸೋಮವಾರ ನಡೆದಿದೆ.

ಗ್ರಾಮದ ಮಹಲಿಂಗೇಗೌಡ (50) ಮೃತರು. ವ್ಯವಸಾಯದ ಜೊತೆಗೆ ಟ್ರ್ಯಾಕ್ಟರ್ ಬಾಡಿಗೆ ಮಾಡಿಕೊಂಡಿದ್ದ ಅವರು ಕೃಷ್ಣೇಗೌಡ ಎಂಬುವವರ ತೋಟದ ತೆಂಗಿನಕಾಯಿ ತುಂಬಿಕೊಂಡು ಬರಲು ಹೋಗಿದ್ದಾಗ ಅವಘಡ ಸಂಭವಿಸಿದೆ.

ಗ್ರಾಮದ ಶಂಕರ ಕಟ್ಟೆಯ ಏರಿಯ ಬಳಿ ವೇಗವಾಗಿ ರಸ್ತೆಯ ಎಡಕ್ಕೆ ಮಣ್ಣು ರಸ್ತೆಯ ಕಡೆಗೆ ತಿರುಗಿಸಿದಾಗ ವಾಹನ ನಿಯಂತ್ರಣಕ್ಕೆ ಸಿಗದೆ ಪಲ್ಟಿಯಾಗಿದೆ. ಬಾನೆಟ್ ಕೆಳಭಾಗಕ್ಕೆ ಸಿಲುಕಿದ ಮಹಲಿಂಗೇಗೌಡ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಗಂಡಸಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬೇಲೂರು ತಾಲ್ಲೂಕು ಕಚೇರಿ ಖಾಲಿ-ಖಾಲಿ

## ಬಗರ್ ಹುಕುಂ ಹಗರಣ : ರಜೆ ಮೇಲೆ ತೆರಳಿದ ಅಧಿಕಾರಿ, ಸಿಬ್ಬಂದಿ

• ಪ್ರಜೋದಯ ವರದಿ

**ಹಾಸನ:** ಅಕ್ರಮವಾಗಿ ಬಗರ್ ಹುಕುಂ ಜಮೀನು ಮಂಜೂರಾತಿ ಮಾಡಿದ ಆರೋಪದಡಿ ಮಾಜಿ ಶಾಸಕ ಕೆ.ಎಸ್.ಲಿಂಗೇಶ್ ಸೇರಿ ಹಲವು ಅಧಿಕಾರಿಗಳನ್ನು ಸಿಐಡಿ ಪೊಲೀಸರು ಬಂಧಿಸಿ, ತನಿಖೆ ಚುರುಕುಗೊಳಿಸಿದ ಬೆನ್ನಲ್ಲೇ ಬೇಲೂರು ತಾಲ್ಲೂಕು ಕಚೇರಿ ಸಿಬ್ಬಂದಿ, ಅಧಿಕಾರಿಗಳು ರಜೆ ಮೇಲೆ ತೆರಳಿರುವುದರಿಂದ ಕಚೇರಿ ಖಾಲಿ ಹೊಡೆಯುತ್ತಿದೆ.

ಪ್ರಕರಣಕ್ಕೆ ಸಂಬಂಧಪಟ್ಟಂತೆ ಸಿಐಡಿ ಪೊಲೀಸರು 17 ಅಧಿಕಾರಿಗಳು ಹಾಗು ಸಿಬ್ಬಂದಿಗೆ ವಾರಂಟ್ ನೋಟೀಸ್ ನೀಡಿರುವುದರಿಂದ ಬಹುತೇಕರು ಗೈರಾಗಿರುವುದರಿಂದ ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ತೊಡಕಾಗಿದೆ. ವಾರಂಟ್ ನೋಟೀಸ್ ಪಡೆದಿರುವ ಅಧಿಕಾರಿಗಳು ಹಾಗು ಸಿಬ್ಬಂದಿ ಬಂಧನದ ಭೀತಿಯಿಂದ ನಿರೀಕ್ಷಣಾ ಜಾಮೀನಿಗಾಗಿ ನ್ಯಾಯಾಲಯದ ಮೊರೆ ಹೋಗಿದ್ದಾರೆ. ನೋಟೀಸ್ ಪಡೆದವರು ಜೂ.25ರಂದು ವಿಚಾರಣೆ ಎದುರಿಸಲಿದ್ದಾರೆ.

ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತಾಧಿಕಾರಿಗಳು ಹಾಗು ಇತರೆ ಸಿಬ್ಬಂದಿ ರಜೆ ಮೇಲೆ ತೆರಳಿರುವುದರಿಂದ ಇಲಾಖೆಯ ಡಿಜಿಟಲ್ ಲಾಗಿನ್ ಮತ್ತು ಸೇವಾ ನಿರ್ವಹಣೆಯಲ್ಲೂ ಸಮಸ್ಯೆ ಎದುರಾಗಿದೆ. ಸಂಬಂಧಪಟ್ಟ ಅಧಿಕಾರಿಗಳ ಲಾಗಿನ್ ಬದಲಾವಣೆ ಪ್ರಕ್ರಿಯೆ ತಕ್ಷಣ ಸಾಧ್ಯವಾಗದ ಕಾರಣ ಇತರೆ



ಸಿಬ್ಬಂದಿಯಿಂದ ಕಡತಗಳ ವಿಲೇವಾರಿ ನಡೆಸಲು ಅಡಚಣೆ ಉಂಟಾಗಿದೆ. ಮಾತ್ರವಲ್ಲದೇ ಕಂದಾಯ ಇಲಾಖೆಯಲ್ಲಿ ಜನ ಸಾಮಾನ್ಯರ ಕೆಲಸಗಳು ಕಳೆದ ಮೂನಾಲ್ಕು ದಿನಗಳಿಂದ ಸ್ಥಗಿತಗೊಂಡಿವೆ. ಈ ಬಗ್ಗೆ ಜನರು ಪ್ರಶ್ನೆ ಮಾಡಿದರೆ, ಸಂಬಂಧಪಟ್ಟ ಅಧಿಕಾರಿ ರಜೆಯಲ್ಲಿದ್ದಾರೆಂಬ ಸಿದ್ಧ ಉತ್ತರ ನೀಡಲಾಗುತ್ತಿದೆ. ತಾಲ್ಲೂಕು ಆಡಳಿತದ ವಿರುದ್ಧ ಅಸಮಾಧಾನ ವ್ಯಕ್ತ ಪಡಿಸುತ್ತಿದ್ದಾರೆ.

**ಅಗತ್ಯ ದಾಖಲೆಗಾಗಿ ಅಲೆದಾಟ**

ತಾಲ್ಲೂಕು ಕಚೇರಿಯಲ್ಲಿ ಪ್ರಮುಖ ವಿಭಾಗಗಳ ಸಿಬ್ಬಂದಿ ಗೈರುರಾಗಿರುವ ಪರಿಣಾಮ ಸಾರ್ವಜನಿಕ ಸೇವೆಗಳು ತೀವ್ರವಾಗಿ ಕುಂಠಿತಗೊಂಡಿವೆ. ಶಾಲೆ ಹಾಗು ಕಾಲೇಜು ಪ್ರವೇಶಕ್ಕೆ ಅಗತ್ಯವಿರುವ ಆದಾಯ, ಜಾತಿ ಮತ್ತು ವಾಸಸ್ಥಳ ಪ್ರಮಾಣಪತ್ರಗಳು, ವಿವಿಧ

> **ತಾಲ್ಲೂಕು ಕಚೇರಿ ಸಿಬ್ಬಂದಿ, ಕೆಲ ಅಧಿಕಾರಿಗಳು ರಜೆ ಮೇಲೆ ತೆರಳಿರುವುದರಿಂದ ಜನ ಸಾಮಾನ್ಯರ ಕೆಲಸ ಕಾರ್ಯಗಳಿಗೆ ಅಡಚಣೆಯುಂಟಾಗಿದೆ. ಈ ಬಗ್ಗೆ ಜಿಲ್ಲಾಡಳಿತದೊಂದಿಗೆ ಚರ್ಚೆ ನಡೆಸಿದ್ದು, ಹೆಚ್ಚುವರಿ ಸಿಬ್ಬಂದಿ ನಿಯೋಜಿಸಿಕೊಂಡು ಸಮಸ್ಯೆಯಾಗದಂತೆ ನೋಡಿ ಕೊಳ್ಳಲಾಗುವುದು.**
> **-ಶ್ರೀಧರ್ ಕಂಕಣವಾಡಿ, ತಹಶೀಲ್ದಾರ್ ಬೇಲೂರು**

ನೇಮಕಾತಿಗಳಿಗೆ ಬೇಕಾದ ದಾಖಲೆಗಳು ಹಾಗು ರೈತರ ಭೂ ದಾಖಲೆಗಳಿಗೆ ಸಂಬಂಧಿಸಿದ ಅರ್ಜಿಗಳ ವಿಲೇವಾರಿ ವಿಳಂಬವಾಗುತ್ತಿದೆ. ಅದರಿಂದ ವಿದ್ಯಾರ್ಥಿಗಳು, ರೈತರು, ಉದ್ಯೋಗಾಕಾಂಕ್ಷಿಗಳು ಕಚೇರಿಗೆ ಅಲೆಯುವಂತಾಗಿದೆ.

**ಸಮಸ್ಯೆ ಸರಿಪಡಿಸಲು ಆಗ್ರಹ**

ಬಗರ್ ಹುಕುಂ ಅಕ್ರಮ ಪ್ರಕರಣದ ತನಿಖೆಯಿಂದ ತಾಲ್ಲೂಕು ಕಚೇರಿಯ ಆಡಳಿತ ಯಂತ್ರವೇ ಅಸ್ತವ್ಯಸ್ತಗೊಂಡಿದೆ. ತಾಲ್ಲೂಕು ಕಚೇರಿ ಆಡಳಿತ ವೈಫಲ್ಯದಿಂದ ಸಾರ್ವಜನಿಕರಿಗೆ ಉಂಟಾಗುತ್ತಿರುವ ತೊಂದರೆ ವಿರುದ್ಧ ಸಾರ್ವಜನಿಕ ವಲಯದಲ್ಲಿ ಆಕ್ಷೇಪ ವ್ಯಕ್ತವಾಗುತ್ತಿದೆ. ತಕ್ಷಣ ಪರ್ಯಾಯ ವ್ಯವಸ್ಥೆ ಕಲ್ಪಿಸಿ, ಎದುರಾಗಿರುವ ಸಮಸ್ಯೆ ಸರಿಪಡಿಸಬೇಕೆಂದು ಸಾರ್ವಜ ನಿಕರು ಆಗ್ರಹಿಸಿದ್ದಾರೆ.

# ಗಾಂಜಾ ನಶೆಯಲ್ಲಿ ಮಾರಕಾಸ್ತ್ರಗಳಿಂದ ದಾಳಿಗೆ ಯತ್ನ



» ಮೊದಲನೇ ಪುಟದಲ್ಲಿ

ರಾತ್ರಿ ದಿನೇಶ್ ಕಾರಿನಲ್ಲಿ ಚಾಲಕರಿಗೆ ಊಟ ತೆಗೆದು ಕೊಂಡು ಬಂದಿದ್ದರು. ಈ ವೇಳೆ ಗಾಂಜಾ ಸೇವನೆ ಮಾಡಿ ಲಾಂಗ್, ಕಬ್ಬಿಣದ ರಾಡ್ ಹಿಡಿದು ಸ್ಥಳಕ್ಕೆ ಬಂದ ಕೀರ್ತನ್, ಕಿರಣ್ ಹಾಗು ಓಂಕಾರ ಎಂಬುವವರು ಏಕಾಏಕಿ ಊಟ ಮಾಡುತ್ತಿದ್ದ ಚಾಲಕರ ಮೇಲೆ ಹಲ್ಲೆ ನಡೆಸಿದ್ದಾರೆ. ತಕ್ಷಣ ಚಾಲಕರು ಊಟ ಬಿಟ್ಟು ಓಡಿ ಹೋಗಿದ್ದಾರೆ.

ನಂತರ ಅಲ್ಲೇ ಇದ್ದ ಟಿಪ್ಪರ್ ಚಾಲನೆ ಮಾಡಿಕೊಂಡು ದಿನೇಶ್ ಅವರ ಕಾರಿಗೆ ಡಿಕ್ಕಿ ಹೊಡೆದು ಪಲ್ಟಿ ಹೊಡೆಸಿ ಸ್ವಲ್ಪ ದೂರ ಎಳೆದೊಯ್ದಿದ್ದಾರೆ. ಕಾರು ಸಂಪೂರ್ಣ ನಜ್ಜುಗುಜ್ಜಾಗಿದೆ. ಕಬ್ಬಿಣದ ರಾಡ್ ಹಾಗು ಮಚ್ಚನ್ನು ಸ್ಥಳದಲ್ಲೇ ಬಿಟ್ಟಿರುವ ಮೂವರು ಗ್ರಾಮದ ಗಂಗಾಧರ್ ಎಂಬುವವರ ಒಂಟಿ ಮನೆ ಮೇಲೆ ದಾಳಿ ಮಾಡಿ ಬಾಗಿಲು ಮುರಿಯಲು ಯತ್ನಿಸಿದ್ದಾರೆ. ಕಿಡಿಗೇಡಿಗಳನ್ನು ಕಂಡು ಬೊಗಳಿದ ನಾಯಿಯ ಮೇಲೂ ದೊಣ್ಣೆಯಿಂದ ಹಲ್ಲೆ ಮಾಡಿದ್ದಾರೆ. ಬಳಿಕ ಗ್ರಾಮಸ್ಥರು ಪೊಲೀಸರಿಗೆ ಕರೆ ಮಾಡಿದ್ದು, ಮೂವರನ್ನು ಪೊಲೀಸ್ ಠಾಣೆಗೆ ಕರೆಸಿ ವೈದ್ಯಕೀಯ ತಪಾಸಣೆ ಮಾಡಿಸದೆ ವಾಪಾಸ್ ಕಳುಹಿಸಿದ್ದಾರೆಂದು ಪೊಲೀಸರ ವಿರುದ್ಧ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಜಾನುವಾರು ಕಳವು ತಡೆಗೆ ಎಫ್‌ಐಆರ್ ಅಸ್ತ್ರ

» ಮೊದಲನೇ ಪುಟದಿಂದ

ಪರಿಹಾರ ದೊರೆಯುತ್ತದೆ. ಕುರಿ, ಮೇಕೆಗಳಿಗೆ 7 ಸಾವಿರ ರೂ. ಹಾಗು 0ಯಿಂದ 6 ತಿಂಗಳ ಒಳಗಿನ ಪ್ರಾಣಿ ಗಳಿಗೆ 5 ಸಾವಿರ ರೂ.ತನಕ ಪರಿಹಾರ ದೊರೆಯಲಿದೆ. ರಾಸುಗಳಿಗೆ ವಿಮೆ ಹಾಗು ಕಿವಿಯೋಲೆ ಎರಡೂ ಇದ್ದರೆ ಅದರ ಮಾರುಕಟ್ಟೆ ಮೌಲ್ಯ ಎಷ್ಟಿರುತ್ತದೋ ಅಷ್ಟು ಹಣವನ್ನು ಸರ್ಕಾರ ದಿಂದ ಕೊಡಿಸುವ ಅವಕಾಶವಿದೆ.

**ಮಝುಲ್ ಮ್ಯಾಪಿಂಗ್ ಅನುಷ್ಠಾನ:** ರಾಸುಗಳ ನಿಖರ ಪತ್ತೆ ಹಚ್ಚುವ ಉದ್ದೇಶದಿಂದ ಪ್ರಸ್ತುತ ಕಿವಿಯೋಲೆ ಹಾಕಲಾಗುತ್ತಿದೆಯಾದರೂ ಅಕ್ರಮ ವಾಗಿ ಕಸಾಯಿ ಖಾನೆಗೆ ಸಾಗಿಸುವವರು ಅದನ್ನು ಕಿತ್ತು ಹಾಕುವ, ಬಹಳ ದಿನಗಳಾದ ಬಳಿಕ ಅದೇ ಬಿದ್ದು ಹೋಗುವ ಸಾಧ್ಯತೆ ಇದೆ. ಕೇಂದ್ರ ಸರ್ಕಾರ ರಾಷ್ಟ್ರೀಯ ಜಾನುವಾರು ಮಿಷನ್ ಯೋಜನೆಯಡಿ ಮಝುಲ್ ಮ್ಯಾಪಿಂಗ್‌ಗೆ ಮುಂದಾಗಿದೆ. ಅಂದರೆ ಜಾನು ವಾರುಗಳ ಮುಖದ ಭಾಗವನ್ನು ಸ್ಕ್ಯಾನ್ ಮಾಡಿ ದತ್ತಾಂಶವನ್ನು ಸಂಗ್ರಹಿಸಿಟ್ಟುಕೊಳ್ಳಲಾಗುತ್ತದೆ. ಕಿವಿಯೋಲೆಗಿಂತ ಈ ಪ್ರಕ್ರಿಯೆ ಪರಿಣಾಮ ಕಾರಿ ಆಗಲಿದೆ. ಪ್ರಾಯೋಗಿಕವಾಗಿ ರಾಜ್ಯದ 2 ಜಿಲ್ಲೆಗಳಲ್ಲಿ ಈ ಯೋಜನೆ ಜಾರಿಗೊಳಿಸಿದ್ದು ಮುಂದಿನ ವರ್ಷದಿಂದ ಹಾಸನದಲ್ಲೂ ಜಾರಿಯಾಗಲಿದೆ.

## ಸಿಮೆಂಟ್ ಮಂಜು ವಿರುದ್ಧ ಕಮೀಷನ್ ಆರೋಪ

» ಮೊದಲನೇ ಪುಟದಿಂದ

ದ್ದರೂ ದಿನಾಂಕ ನಿಗದಿಯಾಗದ ಕಾರಣ ಕಾಮಗಾರಿ ಆರಂಭಿಸಲು ಸಾಧ್ಯವಾಗುತ್ತಿಲ್ಲವೆಂದು ದೂರಿದರು. ಮಳೆಗಾಲ ಆರಂಭವಾಗಿರುವುದರಿಂದ ಕಾಮಗಾರಿ ನಿರ್ವಹಣೆಗೆ ತೊಡಕಾಗಿದ್ದು, ಟೆಂಡರ್, ತಾಂತ್ರಿಕ ಪ್ರಕ್ರಿಯೆಗಳಿಗಾಗಿ ಈಗಾಗಲೇ ಲಕ್ಷಾಂತರ ರೂ. ವೆಚ್ಚವಾಗಿದೆ. ಒಂದು ಕಡೆ ಇಲಾಖೆ ಕಾಮಗಾರಿ ತಕ್ಷಣ ಆರಂಭಿಸುವಂತೆ ಸೂಚಿಸುತ್ತಿದ್ದರೆ, ಮತ್ತೊಂ ದು ಕಡೆ ಗುದ್ದಲಿ ಪೂಜೆ ಮುಗಿಯುವವರೆಗೆ ಕಾಯುವಂತೆ ಹೇಳಲಾಗು ತ್ತಿದೆ. ಈ ದ್ವಂದ್ವದಿಂದ ಆರ್ಥಿಕ ನಷ್ಟ ಉಂಟಾಗುತ್ತಿದ್ದು, ತಕ್ಷಣ ಕಾಮಗಾರಿ ಆರಂಭಿಸಲು ಅವಕಾಶ ಕಲ್ಪಿಸ ಬೇಕೆಂದು ಮನವಿ ಮಾಡಿದರು.

# ಜೂ.27-28ಕ್ಕೆ ರಾಜ್ಯ ಮಟ್ಟದ ಅಧ್ಯಯನ ವರ್ಗ

**ಹಾಸನ:** ಅಖಿಲ ಭಾರತೀಯ ಸಾಹಿತ್ಯ ಪರಿಷತ್ ವತಿ ಯಿಂದ ಜೂ.27 ಮತ್ತು 28 ರಂದು ನಗರದ ತಣ್ಣೀರುಹಳ್ಳ ಮಠದಲ್ಲಿ ರಾಜ್ಯ ಮಟ್ಟದ ಆನಂದ ಮಠ (ಬಂಕಿಮ ಚಂದ್ರ ಚಟ್ಟೋಪಾಧ್ಯಾಯರ ಐತಿಹಾಸಿಕ ಕಾದಂಬರಿ) ಅಧ್ಯಯನ ವರ್ಗ ಹಮ್ಮಿಕೊಳ್ಳಲಾಗಿದೆ.

ಜೂ.27ರ ಶನಿವಾರ ಮಧ್ಯಾಹ್ನ 2 ಗಂಟೆಗೆ ಉದ್ಘಾಟನಾ ನೆರವೇರಲಿದ್ದು, ಜೂ.28ರ ಭಾನುವಾರ ಮಧ್ಯಾಹ್ನ 3 ಗಂಟೆಗೆ ಸಮಾರೋಪ ಸಮಾರಂಭ ನಡೆಯಲಿದೆ. ಕಾರ್ಯಕ್ರಮದಲ್ಲಿ ಭಾಗವಹಿಸಲು ಇಚ್ಛಿಸುವವರು ಮೊ.ನಂ. 94487 19579 ಇಲ್ಲಿಗೆ ಸಂಪರ್ಕಿಸಬಹುದೆಂದು ಅ.ಭಾ.ಸಾ.ಪ. ಜಿಲ್ಲಾ ಕಾರ್ಯದರ್ಶಿ ನೇ.ರಾ.ಪ್ರಶಾಂತ್ ತಿಳಿಸಿದ್ದಾರೆ.

# ಸುಳ್ಳು ಕೇಸ್‌ಗೆ ಹೆದರಿ ಆತ್ಮಹತ್ಯೆಗೆ ಯತ್ನಿಸಿದ ಯುವಕ



• ಪ್ರಜೋದಯ ವರದಿ

**ಸಕಲೇಶಪುರ:** ತನ್ನ ವಿರುದ್ಧ ಗಾಂಜಾ ಪ್ರಕರಣ ದಾಖಲಿಸುವುದಾಗಿ ಅಬಕಾರಿ ಪೊಲೀಸರು ಬೆದರಿಕೆ ಹಾಕಿದ್ದಾರೆಂದು ಆರೋಪಿಸಿ ಯುವಕನೊಬ್ಬ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿರುವ ಘಟನೆ ಪಟ್ಟಣದಲ್ಲಿ ನಡೆದಿದೆ.

ತಾಲ್ಲೂಕಿನ ನಾರ್ವೆ ಹೊಸಳ್ಳಿ ಗ್ರಾಮದ ಅಜಯ್‌ಕುಮಾರ್ ಆತ್ಮಹತ್ಯೆಗೆ ಯತ್ನಿಸಿದ ಯುವಕ. ಕಳೆದ ಆರು ತಿಂಗಳಿನಿಂದ ಪಟ್ಟಣದ ಹಳೇಸಂತವೇರಿ ಬಡಾವಣೆಯ ಶನಿದೇವರ ದೇವಸ್ಥಾನ ಹಿಂಭಾಗ ಬಾಡಿಗೆ ಮನೆಯಲ್ಲಿ ವಾಸವಿರುವ ಈತ ಮೆಡಿಕಲ್ ರೆಪ್ರೆಸೆಂಟೇಟಿವ್ ಆಗಿ ಕೆಲಸ ಮಾಡುತ್ತಿದ್ದಾನೆ. ಸೋಮವಾರ ಮಧ್ಯಾಹ್ನ ಮನೆಯಲ್ಲಿ ವಿಷ ಸೇವಿಸಿದ್ದ. ಮನೆ ಮಾಲೀಕರು ತಕ್ಷಣ ಪೊಲೀಸರಿಗೆ ಮಾಹಿತಿ ನೀಡಿ ಆತನನ್ನು ಆಸ್ಪತ್ರೆಗೆ ದಾಖಲಿಸಿದರು. ಕ್ರಾಫರ್ಡ್ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ನೀಡಿದ ಬಳಿಕ ಹಾಸನದ ಹಿಮ್ಸ್‌ಗೆ ದಾಖಲಿಸಲಾಗಿದೆ.

ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅಜಯ್‌ಕುಮಾರ್, ಗಾಂಜಾ ಪೆಡ್ಲರ್ ರವಿ ಎಂಬಾತನ ಮಾತು ಕೇಳಿ ಅಬಕಾರಿ ಪೊಲೀಸರು ನನ್ನ ವಿರುದ್ಧ ಹಗೆತನ ಸಾಧಿಸುತ್ತಿದ್ದಾರೆ. ಎರಡು ಬಾರಿ ಪೊಲೀಸರು ಮನೆಗೆ ಬಂದು ಪರಿಶೀಲಿಸಿದರೂ ಗಾಂಜಾ ಅಥವಾ ಯಾವುದೇ ಮಾದಕ ವಸ್ತುಗಳು ಪತ್ತೆಯಾಗಿಲ್ಲ. ವೈದ್ಯಕೀಯ ಪರೀಕ್ಷೆಯಲ್ಲಿಯೂ ನಾನು ಗಾಂಜಾ ಸೇವನೆ ಮಾಡಿಲ್ಲ ಎಂಬುದು ದೃಢಪಟ್ಟಿದೆ. ಆದರೂ ಅಬಕಾರಿ ಇಲಾಖೆಯ ಅಧಿಕಾರಿಗಳು ಕಠಿಣ ಪ್ರಕರಣ ದಾಖಲಿಸಿ ಜೈಲಿಗೆ ಕಳುಹಿಸುವುದಾಗಿ ಬೆದರಿಕೆ ಹಾಕಿ 10 ಸಾವಿರ ರೂ. ಪಡೆದಿದ್ದಾರೆಂದು ಆರೋಪಿಸಿದರು.

ನನ್ನನ್ನು ಯಾವುದಾದರೂ ಪ್ರಕರಣದಲ್ಲಿ ಸಿಲುಕಿಸಿ ಜೈಲಿಗೆ ಕಳುಹಿಸಿ ಎಂದು ರವಿ ಪೊಲೀಸರಿಗೆ ದೂರು ಕೊಟ್ಟಿದ್ದಾನೆ. ನನ್ನ ಮೇಲೆ ಏಕೆ ದ್ವೇಷ ಸಾಧಿಸುತ್ತಿದ್ದೀರಿ ಎಂದು ಪೊಲೀಸರಿಗೆ ಕರೆ ಮಾಡಿ ಕೇಳಿದ್ದೆ. ನನ್ನ ಜೀವಕ್ಕೆ ಅಪಾಯವಾದರೆ ಅದಕ್ಕೆ ಗಾಂಜಾ ಪೆಡ್ಲರ್ ರವಿ ಹಾಗು ಅಬಕಾರಿ ಪೊಲೀಸರೇ ಕಾರಣವೆಂದು ದೂರಿದರು.

# ಮಕ್ಕಳ ಮನೆ ಯೋಜನೆಗೆ ಉತ್ತಮ ಸ್ಪಂದನೆ

• ಪ್ರಜೋದಯ ವರದಿ



**ರಾಮನಾಥಪುರ:** ಗ್ರಾಮೀಣ ಮಕ್ಕಳಿಗೆ ಗುಣಮಟ್ಟದ ಪೂರ್ವ ಪ್ರಾಥಮಿಕ ಶಿಕ್ಷಣ ನೀಡುವ ಉದ್ದೇಶದಿಂದ ಆರಂಭಿಸಿರುವ ಮಕ್ಕಳ ಮನೆ ಯೋಜನೆಗೆ ಪೋಷಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಗುತ್ತಿದೆ. ದಾಖಲಾತಿಗಾಗಿ ಈಗಾಗಲೇ ಹೆಚ್ಚಿನ ಸಂಖ್ಯೆಯಲ್ಲಿ ಹೆಸರು ನೋಂದಾಯಿಸಲಾಗುತ್ತಿದೆಂದು ಮಾಜಿ ಸಚಿವ ಎ.ಮಂಜು ಅವರು ಹೇಳಿದರು.

ಹೋಬಳಿಯ ಬೋರೆಕೊಪ್ಪಲು ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಅರಕಲಗೂಡು ತಾಲ್ಲೂಕಿನ 19ನೇ ಮಕ್ಕಳ ಮನೆ ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು, ತಾಲ್ಲೂಕಿನಲ್ಲಿರುವ ಮಕ್ಕಳ ಮನೆ ಕೇಂದ್ರಗಳು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಸಾವಿರಾರು ಮಕ್ಕಳು ಶಿಕ್ಷಣ ಪಡೆಯುತ್ತಿದ್ದಾರೆ. ಖಾಸಗಿ ಶಾಲೆಗಳಿಗೆ ಸಮಾನವಾದ ಗುಣಮಟ್ಟದ ಕಲಿಕಾ ವಾತಾವರಣವನ್ನು ಸರ್ಕಾರಿ ಶಾಲೆಗಳಲ್ಲಿಯೇ ಕಲ್ಪಿಸುವ ಮೂಲಕ ಗ್ರಾಮೀಣ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲಾಗುತ್ತಿದೆ ಎಂದು ತಿಳಿಸಿದರು.

ಸ್ಥಳೀಯ ಜನಪ್ರತಿನಿಧಿಗಳು, ಅಧಿಕಾರಿಗಳು, ಶಿಕ್ಷಕರು, ಪೋಷಕರು ಮಕ್ಕಳ ಮನೆ ಕಾರ್ಯಕ್ರಮದ ಯಶಸ್ಸಿಗೆ ಶುಭ ಹಾರೈಸುತ್ತಿದ್ದಾರೆ. ಶಿಕ್ಷಣ ಕ್ಷೇತ್ರದಲ್ಲಿ ಅರಕಲಗೂಡು ತಾಲ್ಲೂಕು ಹೊಸ ಮೈಲಿಗಲ್ಲುಗಳನ್ನು ಸಾಧಿಸುತ್ತಿದ್ದು, ಈ ಯೋಜನೆಯು ಗ್ರಾಮೀಣ ಮಕ್ಕಳ ಭವಿಷ್ಯ ರೂಪಿಸು ವಲ್ಲಿ ಮಹತ್ವದ ಪಾತ್ರ ವಹಿಸಲಿದೆ. ಎಲ್‌ಕೆಜಿ ಮತ್ತು ಯುಕೆಜಿ ಮಕ್ಕಳಿಗಾಗಿ ವಿಶೇಷ ಕಲಿಕಾ ವ್ಯವಸ್ಥೆ ರೂಪಿಸಲಾಗಿದೆ. ಮಕ್ಕಳ ಸಮಗ್ರ ಬೆಳವಣಿಗೆಗೆ ಯೋಜನೆ ಸಹಕಾರಿಯಾಗಲಿದೆ ಎಂದು ಹೇಳಿದರು. ಇದೇ ವೇಳೆ ಮಕ್ಕಳಿಗೆ ಉಚಿತ ಸಮವಸ್ತ್ರ, ಶಾಲಾ ಬ್ಯಾಗ್ ಹಾಗು ಪಠ್ಯಪುಸ್ತಕಗಳನ್ನು ವಿತರಿಸಿದರು.

# ಅಂಬೇಡ್ಕರ್ ಪ್ರತಿಮೆ ಲೋಕಾರ್ಪಣೆ ವಿಳಂಬ ಖಂಡಿಸಿ ಪ್ರತಿಭಟನೆ

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ತಾಲ್ಲೂಕು ಕಚೇರಿ ಆವರಣದಲ್ಲಿ ನಿರ್ಮಿಸಿರುವ ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್ ಪ್ರತಿಮೆ ಲೋಕಾರ್ಪಣೆಗೆ ನಿರ್ಲಕ್ಷ್ಯ ವಹಿಸಲಾಗುತ್ತಿದೆಂದು ಆರೋಪಿಸಿ ಪುರಸಭೆ ನಾಮನಿರ್ದೇಶಿತ ಮಾಜಿ ಸದಸ್ಯ ನಂಜುಂಡ ಮೈಮ್ ಅವರು ಮಂಗಳವಾರ ಏಕಾಂಗಿ ಪ್ರತಿಭಟನೆ ನಡೆಸಿದರು.

ಪ್ರತಿಮೆ ಎದುರು ಬಾಯಿಗೆ ಕಪ್ಪು ಬಟ್ಟೆ ಧರಿಸಿ ಮೌನ ಪ್ರತಿಭಟನೆ ನಡೆಸಿದ ಅವರು ನಂತರ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದರು. ಸಂವಿಧಾನದ ಮೂಲಕ ದೇಶದ ಪ್ರತಿಯೊಬ್ಬರಿಗೂ ಸ್ವಾಭಿಮಾನದ ಬದುಕು ಕಲ್ಪಿಸಿಕೊಟ್ಟ ಅಂಬೇಡ್ಕರ್ ಅವರನ್ನು ಎಲ್ಲರೂ ಸ್ಮರಿಸುತ್ತೇವೆ. ಗೌರವಾ ರ್ಥವಾಗಿ ಪಟ್ಟಣದಲ್ಲಿ ಪ್ರತಿಮೆ ಸ್ಥಾಪಿಸಲಾಗಿದೆ. ಕಾಮಗಾರಿ ಮುಗಿದು ಎಂಟು ತಿಂಗಳು ಕಳೆದರೂ ಲೋಕಾರ್ಪಣೆ ಮಾಡಿಲ್ಲ. ಈ ವಿಳಂಬಕ್ಕೆ ಕಾರಣ ಏನೆಂಬುದು ಅರ್ಥವಾಗುತ್ತಿಲ್ಲ ವೆಂದರು.

ಶೀಘ್ರದಲ್ಲೇ ಅಂಬೇಡ್ಕರ್ ಪ್ರತಿಮೆ ಉದ್ಘಾಟಿಸದಿದ್ದರೆ ಮುಂದಿನ ದಿನಗಳಲ್ಲಿ ವಿವಿಧ ಸಂಘಟನೆಗಳೊಂದಿಗೆ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಕೆ ನೀಡಿದರು.

# ನ್ಯಾಯಯುತ ಗಣಿಗಾರಿಕೆಗೆ ಅಡ್ಡಿ: ಆಕ್ರೋಶ

• ಪ್ರಜೋದಯ ವರದಿ




**ಹಾಸನ:** ಜೀವನ ನಿರ್ವಹಣೆಗಾಗಿ ಪೂರ್ವಿಕರ ಕಾಲದಿಂದ ಮಾಡಿಕೊಂಡು ಬಂದಿರುವ ಕಲ್ಲು ಒಡೆಯುವ ಕೆಲಸಕ್ಕೆ ಕೆಲವರು ಇಲ್ಲಸಲ್ಲದ ಆರೋಪ ಮಾಡುತ್ತಾ ತೊಂದರೆ ಮಾಡುತ್ತಿದ್ದಾರೆಂದು ಅಖಿಲ ಕರ್ನಾಟಕ ಭೋವಿ ಮಹಾಸಭಾದ ರಾಜ್ಯಾಧ್ಯಕ್ಷ ಹೆಚ್. ಮಂಜಪ್ಪ ಅವರು ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿದ ಅವರು, ಆಲೂರು ತಾಲ್ಲೂಕು ಮಗ್ಗೆ ಗ್ರಾಮದ ಸರ್ವೆ ನಂ. 151ರ 3 ಎಕರೆ ಸರ್ಕಾರಿ ಗೋಮಾಳ ಜಾಗದಲ್ಲಿ ಕಲ್ಲು ಗಣಿ ಗಾರಿಕೆಗೆ ಮಂಜೂರಾಗಿದೆ. ಆದರೆ ಹೊಸಮಠ ಗ್ರಾಮದ ಕೆಲವರು ನಿರಂತರ ಕಿರುಕುಳ ನೀಡುತ್ತಿದ್ದಾರೆ. ಭೋವಿ ಸಮಾಜದ ಆರ್ಥಿಕ ಸ್ವಾವಲಂಬನೆ ಮತ್ತು ಕಾರ್ಮಿಕರ ಬದುಕಿಗೆ ಆಧಾರವಾಗಿರುವ ಗಣಿಗಾರಿಕೆ ಚಟುವಟಿಕೆಗಳನ್ನು ಉದ್ದೇಶ ಪೂರ್ವಕವಾಗಿ ಸ್ಥಗಿತಗೊಳಿಸಲು ಕುತಂತ್ರ ನಡೆಸುತ್ತಿದ್ದಾರೆ. ಅವಹೇಳನ, ಅಕ್ರಮ ಪ್ರವೇಶ, ಕೆಲಸಕ್ಕೆ ಅಡೆತಡೆ ಹಾಗು ವಾಹನ ತಡೆದು ಕಿರುಕುಳ ನೀಡುತ್ತಿದ್ದು, ಇದೇ ವರ್ತನೆ ಮುಂದುವರಿದರೆ ದಲಿತ ದೌರ್ಜನ್ಯ ತಡೆ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗುವುದೆಂದು ಎಚ್ಚರಿಕೆ ನೀಡಿದರು.

ಗಣಿಗಾರಿಕೆಗೆ ಸ್ಫೋಟಕ ಬಳಕೆಯಿಂದ ಬೆಳೆ ಹಾನಿ, ಭಾರಿ ವಾಹನಗಳ ಓಡಾಟದಿಂದ ರೈತರಿಗೆ ತೊಂದರೆ, ಕಾಡು ಪ್ರಾಣಿಗಳ ವಾಸಸ್ಥಾನಕ್ಕೆ ಹಾನಿ ಹಾಗು ಮೂಲ ಸೌಕರ್ಯ ಹಾಳಾಗುತ್ತಿದೆ ಎಂದು ಸುಳ್ಳು ಆರೋಪ ಮಾಡುತ್ತಿದ್ದಾರೆ. ಹೀಗಾಗಿ ಜಿಲ್ಲಾಡಳಿತದ ಒಂದೂವರೆ ವರ್ಷ ಗಣಿಗಾರಿಕೆ ಚಟುವಟಿಕೆ ಸ್ಥಗಿತಗೊಳಿಸಿತ್ತು. ಆ ಆದೇಶದ ವಿರುದ್ಧ ಭೋವಿ ಸಮಾಜದ ಸದಸ್ಯರು ಜಿಲ್ಲಾಧಿಕಾರಿ ಕಚೇರಿ ಎದುರು 15 ದಿನ ಅಹೋರಾತ್ರಿ ಧರಣಿ ನಡೆಸಿದ ನಂತರ ಜಿಲ್ಲಾಧಿಕಾರಿ ಅವರು ಉನ್ನತ ಮಟ್ಟದ ಸಮಿತಿ ರಚಿಸಿ ಸರ್ವೆ ಮಾಡಿಸಿದ್ದರು. ಅಲ್ಲಿ ಅಕ್ರಮವಾಗಿ ಏನೂ ನಡೆಯುತ್ತಿಲ್ಲವೆಂಬುದು ರುಜುವಾತಾದ ಬಳಿಕ ಗಣಿಗಾರಿಕೆಗೆ ಅವಕಾಶ ಕಲ್ಪಿಸಿದ್ದಾರೆ. ಆದರೂ ಕೆಲವರು ವಿರೋಧ ಚಟುವ ಟಿಕೆ ನಿಲ್ಲಿಸಿಲ್ಲ. ಕೋರೆಯಲ್ಲಿ ಯಾರೂ ಇಲ್ಲದ ಸಮಯದಲ್ಲಿ ನಿರುಪಯುಕ್ತ ಸ್ಫೋಟಕ ಸಾಮಾಗ್ರಿ ತಂದು ಬಂಡೆ ಗಳ ಮೇಲೆ ಎಸೆದು, ಅಕ್ರಮವಾಗಿ ಸ್ಫೋಟಿಸಲಾಗಿದೆಂದು ದೂರು ನೀಡುತ್ತಿದ್ದಾರೆಂದರು.

ಈ ರೀತಿಯ ಕಿರುಕುಳ ನಿಲ್ಲಿಸದಿದ್ದರೆ ಜಿಲ್ಲಾಧಿಕಾರಿ ಹಾಗು ಜಿಲ್ಲಾ ಪೊಲೀಸ್ ವರಿಷ್ಠಾಧಿ ಕಾರಿಗೆ ದಲಿತ ದೌರ್ಜನ್ಯ ತಡೆ ಕಾಯ್ದೆಯಡಿ ಕ್ರಮ ಕೈಗೊಳ್ಳುವಂತೆ ದೂರು ಸಲ್ಲಿಸಲಾಗುವುದು. ನಮ್ಮ ಮೇಲಿನ ಕಿರುಕುಳ ಮತ್ತು ಅವಮಾನಕಾರಿ ವರ್ತನೆಗಳನ್ನು ಗಂಭೀರವಾಗಿ ಪರಿಗಣಿಸಬೇಕೆಂದು ಆಗ್ರಹಿಸಿದರು.

ಭೋವಿ ಸಮಾಜದ ಜಿಲ್ಲಾಧ್ಯಕ್ಷ ಸಂದೀಪ್, ಭೋವಿ ಕಲ್ಲು ಕುಟಿಕರ ಸಂಘದ ಅಧ್ಯಕ್ಷ ಮಂಜೇಶ್, ಕಾರ್ಮಿಕ ಮುಖಂಡರಾದ ಮಹದೇವ್, ನಾಗರಾಜು, ಚಿನ್ನಸ್ವಾಮಿ ಇದ್ದರು.

## ವಿಕಸನ ಸಂಸ್ಥೆಯಿಂದ ಪತ್ರಕರ್ತರಿಗೆ ಕಾರ್ಯಾಗಾರ

# ಜೀತ ಕಾರ್ಮಿಕ ಪದ್ಧತಿ ವಿರುದ್ಧ ಹೋರಾಟ ಇರಲಿ

• ಪ್ರಜೋದಯ ವರದಿ




**ಹಾಸನ:** ಜೀತ ಕಾರ್ಮಿಕ ಎಂಬ ಅನಿಷ್ಟ ಪದ್ಧತಿಯನ್ನು ಬೇರು ಸಮೇತ ಕಿತ್ತು ಹಾಕಬೇಕೆಂದರೆ ಸಮಾಜದ ಪ್ರತಿಯೊಬ್ಬರು ಶ್ರಮಿಸಬೇಕೆಂದು ವಿಕಸನ ಸಂಸ್ಥೆ ಅಧ್ಯಕ್ಷ ವರ್ಗಿಸ್ ಅವರು ಹೇಳಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ಮಂಗಳವಾರ ಜೀತ ಕಾರ್ಮಿಕ ಪದ್ಧತಿ ಮತ್ತು ಮಾನವ ಕಳ್ಳಸಾಗಣೆ ಕುರಿತು ಪತ್ರಕರ್ತರಿಗಾಗಿ ಏರ್ಪಡಿಸಿದ್ದ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಜೀತ ಕಾರ್ಮಿಕ ಪದ್ಧತಿ ಮತ್ತು ಮಾನವ ಕಳ್ಳಸಾಗಣೆ ಎಂಬ ಅಮಾನವೀಯ ಪಿಡುಗು ಇನ್ನೂ ಸಂಪೂರ್ಣವಾಗಿ ನಿರ್ಮೂಲನೆಯಾಗಿಲ್ಲ. ಬಡತನ, ಅನಕ್ಷರತೆ, ಸಾಮಾಜಿಕ ಅಸಮಾನತೆ ಮತ್ತು ಸಾಲಬಾಧೆಯಿಂದ ಅನೇಕರು ಶೋಷಣೆಯ ಸುಳಿಗೆ ಸಿಲುಕುತ್ತಿದ್ದಾರೆ ಎಂದರು.

ಹಾಸನ, ಚಿಕ್ಕಮಗಳೂರು, ಮೈಸೂರು ಮತ್ತು ಶಿವಮೊಗ್ಗಾ ಜಿಲ್ಲೆಗಳಲ್ಲಿಯೂ ಜಾಗೃತಿ ಕಾರ್ಯಕ್ರಮ, ಕಾನೂನು ಅರಿವು-ನೆರವು ಶಿಬಿರ, ಪುನರ್ವಸತಿ ಯೋಜನೆ ಹಾಗು ಸಾಮಾಜಿಕ ಹಕ್ಕು ಕುರಿತು ಅರಿವು ಮೂಡಿಸುವ ಕಾರ್ಯ ನಡೆಸಲಾಗುತ್ತಿದೆ. ಸಮಾಜದ ಕಟ್ಟಕಡೆಯ ಜನರನ್ನು ಮುಖ್ಯವಾಹಿನಿಗೆ ತರಲು ಸಮುದಾಯ ಆಧಾರಿತ ಚಟುವಟಿಕೆಗಳಿಗೆ ಒತ್ತು ನೀಡಲಾಗುತ್ತಿದೆ. ಜೀತ ಪದ್ಧತಿ ಕಾನೂನು ಬಾಹಿರವಾಗಿದ್ದರೂ, ಅನೇಕ ಕಡೆ ಮುಂದುವರಿಯುತ್ತಿರುವುದು ಆತಂಕಕಾರಿ ಎಂದು ಹೇಳಿದರು.

ಜೀತ ಪದ್ಧತಿಯಿಂದ ಜನರನ್ನು ಮುಕ್ತಗೊಳಿಸಿ ಅವರಿಗೆ ಸರ್ಕಾರಿ ಸೌಲಭ್ಯ, ಜೀವನೋಪಾಯ ಯೋಜನೆ ಮತ್ತು ಪುನರ್ವಸತಿ ನೆರವು ದೊರಕಿಸುವ ಕೆಲಸವನ್ನು ಸಂಸ್ಥೆ ಮಾಡುತ್ತಿದೆ ಎಂದು ವಿವರಿಸಿದರು.

ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವಿಭಾ ವರ್ಗಿಸ್ ಅವರು ಮಾತನಾಡಿ, ಮಾನವ ಕಳ್ಳಸಾಗಣೆ ಕುರಿತು ಸಮಾಜದಲ್ಲಿ ತಪ್ಪು ಕಲ್ಪನೆಗಳಿವೆ. ಮಾನವ ಕಳ್ಳಸಾಗಣೆ ಎಂದರೆ ಕೇವಲ ಮಹಿಳೆಯರು ಅಥವಾ ಮಕ್ಕಳನ್ನು ಲೈಂಗಿಕ ಶೋಷಣೆಗೆ ಬಳಸಿಕೊಳ್ಳುವುದಷ್ಟೇ ಅಲ್ಲ. ಪುರುಷರು, ಮಹಿಳೆಯರು ಮತ್ತು ಮಕ್ಕಳನ್ನು ಬಲವಂತದ ದುಡಿಮೆ, ಭಿಕ್ಷಾಟನೆ, ಗೃಹ ಕಾರ್ಯ, ಕಾರ್ಖಾನೆ ಕೆಲಸ, ಕೃಷಿ ಚಟುವಟಿಕೆ ಸೇರಿ ವಿವಿಧ ಶೋಷಣೆಗೆ ಬಳಸಿಕೊಳ್ಳುವುದೂ ಮಾನವ ಕಳ್ಳಸಾಗಣೆ ವ್ಯಾಪ್ತಿಗೆ ಬರುತ್ತದೆ. ಈ ಕೃತ್ಯ ತಡೆಯಲು ಪ್ರತಿಯೊಬ್ಬರೂ ಜಾಗೃತರಾಗಬೇಕೆಂದು ಕರೆ ನೀಡಿದರು.

ಈ ವೇಳೆ ಜೀತ ಕಾರ್ಮಿಕ ಪದ್ಧತಿಯಿಂದ ವಿಮುಕ್ತರಾದ ಮೂರ್ತಿ ತಮ್ಮ ಬದುಕಿನ ಅನುಭವ ಹಂಚಿಕೊಂಡು ಭಾವುಕರಾದರು.

ಪತ್ರಕರ್ತರಿಗೆ ಪ್ರಾತ್ಯಕ್ಷಿಕೆ ಮೂಲಕ ಜೀತ ಕಾರ್ಮಿಕ ಪದ್ಧತಿ, ಮಾನವ ಕಳ್ಳಸಾಗಣೆ ವಿಧಾನಗಳು, ಕಾನೂನು ಕ್ರಮ, ಬಾಧಿತರ ರಕ್ಷಣೆ ಮತ್ತು ಪುನರ್ವಸತಿ ಪ್ರಕ್ರಿಯೆ ಕುರಿತು ಸಮಗ್ರ ಮಾಹಿತಿ ನೀಡಿದರು. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಾರ್ಯದರ್ಶಿ ಕೆ.ಎಂ. ಹರೀಶ್, ಖಜಾಂಚಿ ಪ್ರಕಾಶ್ ಬೆಳವಾಡಿ, ವಿಕಸನ ಸಂಸ್ಥೆಯ ಯೇಸುದಾಸ್, ಚನ್ನಬಸವೇಶ್ವರ, ಆರ್.ಜಿ.ಗಿರೀಶ್ ಇದ್ದರು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019